# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 98 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 26–10–2023 ಗುರುವಾರ | ಪುಟ: 4 | ಬೆಲೆ : ರೂ.2–00
Volume - 01 Issue - 98 | Title- Code: KARKAN 28269 | Chitradurga | Date: 26-10-2023 Thursday | Page: 4 | Price: Rs. 2-00



ಒಳಪುಟದ ಸುದ್ದಿಗಳು

ಜನರ ಕುಂದುಕೊರತೆ ಆಲಿಸಿ ಸ್ಥಳದಲ್ಲೇ ಪರಿಹರಿಸಿ: ಶಾಸಕ ಡಾ.ಶಾಮನೂರು ಶಿವಶಂಕರಪ್ಪ 2

ಸಿಸೇರಿಯನ್‌ಗಿಂತ ನಾರ್ಮಲ್ ಡೆಲಿವರಿ ತುಂಬಾ ಒಳ್ಳೆಯದು: ಟಿಹೆಚ್‌ಒ 3

ಅ.30ರಂದು ತಾಲ್ಲೂಕುಮಟ್ಟದ "ಜನತಾ ದರ್ಶನ" 4



ಸುದ್ದಿ, ಜಾಹಿರಾತಿಗೆ 9686622252


## ಫಾಸ್ಟ್ ನ್ಯೂಸ್

### ಇಂದು ಡಿಆರ್‌ಎಂ ಸೈನ್ಸ್ ಕಾಲೇಜಿನಲ್ಲಿ ಕಾನೂನು ಅರಿವು

» ದಾವಣಗೆರೆ

ಡಿಆರ್‌ಎಂ ವಿಜ್ಞಾನ ಕಾಲೇಜು, ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ, ಜಿಲ್ಲಾ ವಕೀಲರ ಸಂಘ ಮತ್ತು ಮಾನವ ಹಕ್ಕುಗಳ ಸಂಘ, ದಾವಣಗೆರೆ ಇವರ ಸಂಯುಕ್ತಆಶ್ರಯದಲ್ಲಿ ಮಾನಸಿಕ ಆರೋಗ್ಯ ಮತ್ತು ಕಾನೂನು ಅರಿವು ಕುರಿತು ವಿಶೇಷ ಉಪನ್ಯಾಸ ಕಾರ್ಯಕ್ರಮ ಇದೇ 26 ಮತ್ತು 27ರಂದು 2 ದಿನಗಳ ಕಾಲ ಡಿಆರ್‌ಎಂ ವಿಜ್ಞಾನ ಕಾಲೇಜಿನ ಆವರಣದಲ್ಲಿರುವ ಎಸ್‌ಸ್ ಸಮಿನಾರ್ ಹಾಲ್‌ನಲ್ಲಿ ನಡೆಯಲಿದೆ. 26ರಂದು ಬೆಳಿಗ್ಗೆ 10.30ಕ್ಕೆ ಕಾರ್ಯಕ್ರಮದ ಉದ್ಘಾಟನೆ ನೆರವೇರಲಿದ್ದು, ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಮಹಾವೀರ ಎಂ.ಕರೆಣ್ಣವರ ನೆರವೇರಿಸಲಿದ್ದು, ಮುಖ್ಯಅತಿಥಿಗಳಾಗಿ ದಾವಣಗೆರೆ ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಎಲ್.ಹೆಚ್. ಅರುಣ್‌ಕುಮಾರ್, ವಕೀಲ, ಯೋಗ ತರಬೇತುದಾರರಾದ ಬಿ.ಎನ್.ಮಂಜುನಾಥ್, ಜಿ.ಗೀತಮ್ಮ, ಕಾಲೇಜಿನ ಪ್ರಾಂಶುಪಾಲರಾದ ಡಾ.ಆರ್.ವನಜಾ, ಸಂಪನ್ಮೂಲ ವ್ಯಕ್ತಿಗಳಾಗಿ ಡಾ.ಜೆ.ಬಿ.ರಾಜು, ಭೌತಶಾಸ್ತ್ರ ಮುಖ್ಯಸ್ಥೆ ಎಂ.ಪಿ.ರೂಪಶ್ರೀ, ಡಾ.ಎಲ್.ಎಸ್.ರೋಹಿತ್, ಮಾನವ ಹಕ್ಕುಗಳ ಸಮಿತಿಯ ಸಂಚಾಲಕರಾದ ಡಾ.ಸಿ.ಟಿ.ರಮ್ಯಾಕುಮಾರಿ ಆಗಮಿಸಲಿದ್ದಾರೆ. 27ರಂದು ವಿವಿಧ ವಿಷಯಗಳ ಕುರಿತು ಉಪನ್ಯಾಸ ಕಾರ್ಯಕ್ರಮ ನಡೆಯಲಿದೆ.

### ದೊಡ್ಡೇರಿ: ಖಾಸಗಿ ಕಂಪನಿಯ ಮೊಬೈಲ್ ಟವರ್‌ನ 1.50 ಲಕ್ಷ ಮೌಲ್ಯದ ಬ್ಯಾಟರಿ ಕಳವು

» ಚಳ್ಳಕೆರೆ

ತಾಲ್ಲೂಕಿನ ದೊಡ್ಡೇರಿ ಗ್ರಾಮದ ಖಾಸಗಿ ಜಮೀನಿನಲ್ಲಿದ್ದ ಇಂಡಸ್ ಟವರ್ ಕಂಪನಿಗೆ ಸೇರಿದ ಸುಮಾರು 48 ಬ್ಯಾಟರಿಗಳು ಕಳ್ಳತನವಾಗಿದ್ದು, ಪತ್ತೆ ಮಾಡಿಕೊಂಡುವಂತೆ ಪೊಲೀಸರಿಗೆ ದೂರು ನೀಡಲಾಗಿದೆ. ಆರ್‌ಸಿಪಿಜಿ ಕಂಪನಿಯ ಮೇಲ್ವಿಚಾರಕ ಜಿ.ಆರ್.ಮಂಜುನಾಥ ಈ ಬಗ್ಗೆ ದೂರು ನೀಡಿ, ದೊಡ್ಡೇರಿ ಗ್ರಾಮದ ಆರ್.ವೀರಣ್ಣ ಎಂಬುವವರ ರಿ.ಸರ್ವೆ ನಂ 460ರಲ್ಲಿ ಇಂಡಸ್ ಕಂಪನಿಯ ಮೊಬೈಲ್ ಟವರನ್ನು ಕಳೆದ ಆರು ತಿಂಗಳ ಹಿಂದೆ ಕಾರ್ಯನಿರ್ವಹಣೆಗಾಗಿ 48 ಬ್ಯಾಟರಿಗಳನ್ನು ಅಳವಡಿಸಿಲಿದ್ದು, ಅಲ್ಲಿ ತಾಂತ್ರಿಕ ಅಧಿಕಾರಿಯಾಗಿ ಕಾರ್ಯನಿರ್ವಹಿಸುತ್ತಿರುವ ಆರ್. ದೇವರಾಜ್ ಟವರ್ ಶೆಟ್‌ಡೌನ್ ಆಗಿದೆ.

### ಪರೀಕ್ಷಾ ಅಕ್ರಮಗಳ ಕುರಿತು ಜಾಗರೂಕರಾಗಿರಿ –ಜಿಲ್ಲಾಧಿಕಾರಿ ದಿವ್ಯಪ್ರಭು.ಜಿ.ಆರ್.ಜೆ

# 29ಕ್ಕೆ ವಿವಿಧ ಇಲಾಖೆ ನೇಮಕಾತಿ ಪರೀಕ್ಷೆ

» ಚಿತ್ರದುರ್ಗ

ಇದೇ ಅಕ್ಟೋಬರ್ 29ರಂದು ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ವಿವಿಧ ಇಲಾಖೆಯ ದ್ವಿತಿಯ ದರ್ಜೆ ಸಹಾಯಕರು ಹಾಗೂ ಕಿರಿಯ ಸಹಾಯಕರ ನೇಮಕಾತಿಗಾಗಿ ಸ್ಪರ್ಧಾತ್ಮಕ ಪರೀಕ್ಷೆ ನಡೆಯಲಿದೆ. ಈ ಸಂದರ್ಭದಲ್ಲಿ ತ್ರಿ ಸಮಿತಿ ಸದಸ್ಯರು, ಖಜಾನೆ ಅಧಿಕಾರಿ, ಮಾರ್ಗಾಧಿಕಾರಿಗಳು, ಪರೀಕ್ಷಾ ಕೇಂದ್ರ ಮುಖ್ಯಸ್ಥರು ಹಾಗೂ ಕೊಠಡಿ ಮೇಲ್ವಿಚಾರಕರು ಪ್ರಶ್ನೆ ಪತ್ರಿಕೆ ಹಾಗೂ ಓಎಂಆರ್ ನಿರ್ವಹಣೆಗೆ ಹೆಚ್ಚಿನ ಪ್ರಾಮುಖ್ಯತೆ ನೀಡಬೇಕು ಎಂದು ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ ಹೇಳಿದರು.



ಈ ಕುರಿತು ಬುಧವಾರ ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಜರುಗಿದ ಪೂರ್ವ ಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ನಗರದ 20 ಕೇಂದ್ರಗಳಲ್ಲಿ ನೇಮಕಾತಿ ಪರೀಕ್ಷೆ ನಡೆಯಲಿದೆ. ಒಟ್ಟು 7800 ಅಭ್ಯರ್ಥಿಗಳು ಪರೀಕ್ಷೆ ಬರೆಯಲಿದ್ದಾರೆ. ಯಾವುದೇ ಪರೀಕ್ಷಾ ಅಕ್ರಮಗಳು ನಡೆಯದಂತೆ ಜಾಗರೂಕತೆ ವಹಿಸಬೇಕು. ಪರೀಕ್ಷಾ ಕೇಂದ್ರ ಸುತ್ತ ಪೊಲೀಸ್ ಬಂದೋಬಸ್ತ್ ವ್ಯವಸ್ಥೆ ಮಾಡಬೇಕು. ಶೈಕ್ಷಣಿಕ ಪರೀಕ್ಷೆಗಳಿಗಿಂತಲೂ ನೇಮಕಾತಿ ಪರೀಕ್ಷೆಗಳು ಭಿನ್ನವಾಗಿರುತ್ತವೆ. ಪರೀಕ್ಷಾ ಕಾರ್ಯಗಳಿಗೆ ನಿಯೋಜಿಸಲಾದ ಅಧಿಕಾರಿಗಳನ್ನು ಹೊರತು ಪಡಿಸಿ ಅನ್ಯ ವ್ಯಕ್ತಿಗಳ ಪ್ರವೇಶಕ್ಕೆ ನಿರ್ಬಂಧ ವಿಧಿಸಬೇಕು. ಕರ್ನಾಟಕ ಪರೀಕ್ಷಾ ಪ್ರಾಧಿಕಾರ ಹೊರಡಿಸಿರುವ ಪರೀಕ್ಷಾ ನಿಯಮಗಳನ್ನು ತಪ್ಪದೇ ಪಾಲಿಸಬೇಕು ಎಂದು ಹೇಳಿದರು.

ಅಭ್ಯರ್ಥಿಗಳು ಪರೀಕ್ಷಾ ಕೇಂದ್ರಕ್ಕೆ ತೆರಳು ಮುಂಚೆ ಸೂಕ್ತವಾಗಿ ತಪಾಸಣೆ ನಡೆಸಬೇಕು. ಕರ್ನಾಟಕ ಪರೀಕ್ಷಾ ಪ್ರಾಧಿಕಾರ ಹೊರಡಿಸಿರುವ ವಸ್ತ್ರ ಸಹಿಂತೆಯನ್ನು ಪುರುಷ ಹಾಗೂ ಮಹಿಳಾ ಅಭ್ಯರ್ಥಿಗಳು ಕಡ್ಡಾಯವಾಗಿ ಪಾಲಿಸಬೇಕು. ಲೋಹದ ಆಭರಣಗಳನ್ನು ಯಾವುದೇ ಕಾರಣಕ್ಕೂ ಮಹಿಳಾ ಅಭ್ಯರ್ಥಿಗಳು ಪರೀಕ್ಷಾ ಕೇಂದ್ರದೊಳಗೆ ಧರಿಸಬಾರದು.

ಹಿಜಾಬ್ ಧರಿಸಿದಲ್ಲಿ ಪರೀಕ್ಷಾ ಕೇಂದ್ರಕ್ಕೆ ಒಂದು ಗಂಟೆ ಮುಂಚಿತವಾಗಿ ಆಗಮಿಸಿ ತಪಾಸಣೆಗೆ ಒಳಪಟ್ಟು, ನಂತರ ಪರೀಕ್ಷಾ ಕೊಠಡಿ ತೆರಳಬೇಕು. ಮೊಬೈಲ್ ಸೇರಿದಂತೆ ಯಾವುದೇ ರೀತಿಯ ಎಲೆಕ್ಟ್ರಾನಿಕ್ ವಸ್ತುಗಳು, ಪೆನ್ಸಿಲ್, ಪೇಪರ್, ಎರೇಸರ್, ಜಾಮಿಟ್ರಿ ಬಾಕ್ಸ್ ಹಾಗೂ ಲಾಗ್ ಟೇಬಲ್ ತರುವಂತಿಲ್ಲ. ಪರೀಕ್ಷಾ ಕೇಂದ್ರದ ಒಳಗಡೆ ಆಹಾರ ಸೇವನೆಗೆ ಅವಕಾಶವಿಲ್ಲ. ಈ ಎಲ್ಲಾ ನಿಯಮಗಳನ್ನು ಪರೀಕ್ಷಾ ಕೇಂದ್ರದ ಮುಖ್ಯಸ್ಥರು ಗಮನಿಸಬೇಕು. ಪ್ರತಿ ಪರೀಕ್ಷಾ ಕೇಂದ್ರದಲ್ಲಿ ಆರೋಗ್ಯ ಸಿಬ್ಬಂದಿಗಳನ್ನು ನೇಮಿಸುವಂತೆ ತಿಳಿಸಿದರು.

ಪರೀಕ್ಷಾ ಕಾರ್ಯದಲ್ಲಿ ಲೋಪ ಕಂಡುಬಂದರೆ ಸಂಬಂಧಪಟ್ಟವರ ಮೇಲೆ ಶಿಸ್ತುಕ್ರಮ ಕೈಗೊಳ್ಳಲಾಗುವುದು. ಪರೀಕ್ಷಾ ಅಕ್ರಮಗಳಲ್ಲಿ ಭಾಗಿಯಾದರೆ ಅಂತಹವರ ವಿರುದ್ಧ ಕ್ರಿಮಿನಲ್ ಮೊಕದ್ದಮೆ ದಾಖಲಿಸಿ ಪೊಲೀಸ್ ಬಂಧನಕ್ಕೆ ಒಳಪಡಿಸಲಾಗುವುದು ಎಂದು ಜಿಲ್ಲಾಧಿಕಾರಿ ದಿವ್ಯಪ್ರಭು ಎಚ್ಚರಿಸಿದರು.

ಸುಗಮ ರೀತಿಯಲ್ಲಿ ಪರೀಕ್ಷಾ ಕಾರ್ಯ ನಡೆಸುವಲ್ಲಿ ಅಗತ್ಯ ಕ್ರಮಗಳನ್ನು ಈಗಾಗಲೇ ಕೈಗೊಳ್ಳಲಾಗಿದೆ. ತಾಲೂಕು ಮಟ್ಟದ ಅಧಿಕಾರಿಗಳ ನೇತೃತ್ವದಲ್ಲಿ 5 ಮಾರ್ಗಾಧಿಕಾರಿಗಳ ತಂಡ ನೇಮಿಸಲಾಗಿದೆ. ಅಗತ್ಯ ಬಿದ್ದರೆ ಇನ್ನೂ 2 ಮಾರ್ಗಾಧಿಕಾರಿ ತಂಡಗಳನ್ನು ನೇಮಿಸಲಾಗುವುದು. ಈಗಾಗಲೇ ಪರೀಕ್ಷಾ ಪ್ರವೇಶ ಪತ್ರದಲ್ಲಿ ಅಭ್ಯರ್ಥಿಗಳಿಗೆ ಪರೀಕ್ಷಾ ಕೇಂದ್ರಗಳ ವಿವಿರ ಹಾಗೂ ಅಗತ್ಯ ಸೂಚನೆಗಳನ್ನು ನೀಡಲಾಗಿದೆ. ತ್ರಿ ಸದಸ್ಯ ಸಮಿತಿ ನೇತೃತ್ವದಲ್ಲಿಯೇ ಪ್ರಶ್ನೆ ಪತ್ರಿಕೆ ಹಾಗೂ ಓಎಂಆರ್ ನಿರ್ವಹಣೆ ಮಾಡಲಾಗುವುದು ಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಸಭೆಯಲ್ಲಿ ತಿಳಿಸಿದರು.

ಪರೀಕ್ಷಾ ಕೇಂದ್ರ ಮುಖ್ಯಸ್ಥರು ಹಾಗೂ ಕೊಠಡಿ ಮೇಲ್ವಿಚಾರಕರಿಗೆ ಪರೀಕ್ಷೆ ಸಂಬಂಧ ಸೂಕ್ತ ತರಬೇತಿ ನೀಡಲಾಗಿದೆ. ಪ್ರತಿ ಕೊಠಡಿಯಲ್ಲೂ 24 ಅಭ್ಯರ್ಥಿಗಳು ಪರೀಕ್ಷೆ ಬರೆಯಲಿದ್ದಾರೆ. ಅಂಧ ಹಾಗೂ ಅಂಗವಿಕಲ ಅಭ್ಯರ್ಥಿಗಳಿಗೆ ಪ್ರತ್ಯೇಕ ಕೊಠಡಿ ವ್ಯವಸ್ಥೆ ಕಲ್ಪಿಸಲಾಗಿದೆ ಎಂದು ಪದವಿ ಪೂರ್ವ ಇಲಾಖೆ ಉಪನಿರ್ದೇಶಕ ಆರ್.ಪುಟ್ಟಸ್ವಾಮಿ ತಿಳಿಸಿದರು.

ಸಭೆಯಲ್ಲಿತಹಶೀಲ್ದಾರ್‌ಡಾ.ನಾಗವೇಣಿ, ಜಿಲ್ಲಾ ಖಜಾನಾಧಿಕಾರಿ ರಮೇಶ್, ಇತರೆ ಜಿಲ್ಲಾ ಮಟ್ಟದ ಅಧಿಕಾರಿಗಳು, ಕ್ಷೇತ್ರ ಶಿಕ್ಷಣಾಧಿಕಾರಿಗಳು ಸೇರಿದಂತೆ ಪರೀಕ್ಷಾ ಕೇಂದ್ರಗಳ ಮುಖ್ಯಸ್ಥರು ಉಪಸ್ಥಿತರಿದ್ದರು.

# ಹೆಚ್‌ಡಿಕೆ ರಾಜಕೀಯ ಖಳನಾಯಕ: ಸಿಎಂ

» ಮೈಸೂರು

ರಾಜಕೀಯದಲ್ಲಿ ಯಾರಾದರೂ ಖಳನಾಯಕ ಇದ್ದರೆ ಅದು ಹೆಚ್.ಡಿ.ಕುಮಾರಸ್ವಾಮಿ ಅವರೇ ಎಂದು ಮುಖ್ಯ ಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ಅವರು ಇಂದು ಮೈಸೂರಿನಲ್ಲಿ ಮಾಧ್ಯಮದವವರೊಂದಿಗೆ ಮಾತನಾಡಿದರು.

ಮಾಜಿ ಮುಖ್ಯಮಂತ್ರಿಹೆಚ್.ಡಿ.ಕುಮಾರಸ್ವಾಮಿ ಅವರು ಸರಣಿ ಟ್ವೀಟ್ ಮಾಡಿ ಮುಖ್ಯ ಮಂತ್ರಿಗಳನ್ನು ಮಹಾಭಾರತದ ಎಲ್ಲಾ ಖಳನಾಯಕರಿಗೆ ಹೋಲಿಸಿರುವ ಬಗ್ಗೆ ಪ್ರತಿಕ್ರಿಯೆ ನೀಡಿ ಕ್ರಿಕೆಟ್ ನೋಡಲು ಹೋಗಿದ್ದರು ಎನ್ನುವ ಅವರು ಸರ್ಕಾರ ಬಿದ್ದುಹೋಗುವಾಗ ಅಮೆರಿಕದಲ್ಲಿ ಒಂದು ವಾರ ಕೂತಿದ್ದರು. ಒಂದು ವರ್ಷ 2 ತಿಂಗಳು ತಾಜ್ ವೆಸ್ಟ್ ಎಂಡ್ ನಲ್ಲಿ ಕಾಲಕಳೆಯುತ್ತಿದ್ದರು. ಇವರು ನಮಗೆ ಹೇಳಿಕೊಡಬೇಕೆ ಎಂದರು.



**ತಪ್ಪುದಾರಿಗೆ ಎಳೆಯುತ್ತಿದ್ದಾರೆ:** ಕುಮಾರಸ್ವಾಮಿ ಅವರ ಸರ್ಕಾರವನ್ನು ಸಿದ್ದರಾಮಯ್ಯ ಅವರೇ ಬೀಳಿಸಿದ್ದು, ಅದನ್ನು ಅವರು ಒಪ್ಪಿಕೊಳ್ಳಲಿ ಎಂದಿರುವ ಬಗ್ಗೆ ಮಾತನಾಡಿ ಅದನ್ನು ಅವರು ವಿಧಾನಮಂಡಲದವಿಶ್ವಾಸಮತಯಾಚನೆಯಾದ ಸಂದರ್ಭದಲ್ಲಿ ಉತ್ತರ ನೀಡಿದಾಗ ಈ ಸರ್ಕಾರವನ್ನು ಬೀಳಿಸಿದ್ದು ಬಿಜೆಪಿಯವರು ಎಂದಿರುವುದು ವಿಧಾನಮಂಡಲದ ರೆಕಾರ್ಡ್ ನಲ್ಲಿದೆ. ಅದನ್ನು ಬಿಡುಗಡೆ ಮಾಡುತ್ತೇನೆ. ಈಗ ಬೇರೆ ತರ ಹೇಳುತ್ತಿದ್ದಾರೆ. ಹಾಗಾದರೆ ವಿಧಾನಮಂಡಲವನ್ನು ತಪ್ಪುದಾರಿಗೆ ಎಳೆಯುತ್ತಿದ್ದಾರೆ. ಶಾಸಕರು, ಸಚಿವರನ್ನು ಭೇಟಿ ಮಾಡದೆ ಹೋಟೆಲಿನಲ್ಲಿ ಕುಳಿತಿದ್ದರು ಎಂದರು.

**ಬಿಜೆಪಿ ಅವರಿಗಿಂತ ಹೆಚ್.ಡಿ.ಕುಮಾರಸ್ವಾಮಿ ಹೆಚ್ಚು ಹತಾಶರಾಗಿದ್ದಾರೆ:** ಬಿಜೆಪಿ ಗಿಂತಲೂ ಕುಮಾರಸ್ವಾಮಿ ಅವರು ಹೆಚ್ಚು ಆರೋಪ ಮಾಡುತ್ತಿರುವ ಬಗ್ಗೆ ಪ್ರತಿಕ್ರಿಯೆ ನೀಡಿ ರಾಜಕೀಯವಾಗಿ ಹತಾಶರಾದವರು ಬಾಯಿಗೆ ಬಂದಂತೆ ಮಾತನಾಡುತ್ತಾರೆ. ಹೆಚ್.ಡಿ ಕುಮಾರಸ್ವಾಮಿ ಅವರು ಹತಾಶರಾಗಿ ಬಾಯಿಗೆ ಬಂದಂತೆ ಮಾತನಾಡುತ್ತಿದ್ದಾರೆ ಎಂದರು. ಬಿಜೆಪಿಗಿಂತ ಜಾಸ್ತಿ ಹತಾಶರಾಗಿರುವುದು ಕುಮಾರಸ್ವಾಮಿ. ಬಿಜೆಪಿ ಜೊತೆ ಸೇರದೇ ಹೋಗಿದ್ದಾರೆ ಒಂದು ಸ್ಥಾನವನ್ನೂ ಗೆಲ್ಲಲು ಆಗುತ್ತಿರಲಿಲ್ಲ.

### ಜಮೀನಿಗೆ ಹೋಗಲು ದಾರಿ ಸಮಸ್ಯೆಯೇ?


# ಸರ್ಕಾರ ಹೊಸ ಸುತ್ತೋಲೆ

» ಬೆಂಗಳೂರು

ರೈತರು ಜಮೀನುಗಳಿಗೆ ಸಾಗಲು ಕಾಲುದಾರಿ, ಬಂಡಿದಾರಿ ವ್ಯವಸ್ಥೆ ಇಲ್ಲದೆ ತೊಂದರೆ ಅನುಭವಿಸುತ್ತಾರೆ. ಅದರಲ್ಲೂ ಖಾಸಗಿ ಜಮೀನುಗಳ ಮೂಲಕ ಸಾಗುವಾಗ ಹಲವು ಬಾರಿ ವಾಕ್ಸಮರ, ಹೊಡೆದಾಟಗಳು ನಡೆದ ಅನೇಕ ಪ್ರಕರಣಗಳಿವೆ.

ಈಗ ಕರ್ನಾಟಕ ಸರ್ಕಾರ ರೈತರ ಸಮಸ್ಯೆ ಬಗೆರಿಸಲು ಮುಂದಾಗಿದೆ.

ವಿಮಲಮ್ಮ ಸಿ. ಸರ್ಕಾರದ ಅಧೀನ ಕಾರ್ಯದರ್ಶಿ, ಕಂದಾಯ ಇಲಾಖೆ (ಭೂ ಮಂಜೂರಾತಿ–1) ಕಾಲುದಾರಿ,



ಬಂಡಿದಾರಿ ವ್ಯವಸ್ಥೆ ಮಾಡುವ ಕುರಿತು ಸುತ್ತೋಲೆಯೊಂದನ್ನು ಹೊರಡಿಸಿದ್ದಾರೆ.

## ಪ್ರಮುಖ ಸುದ್ದಿ

# ಏನ್ರಿ ಮೇಷ್ಟ್ರೆ ಶೌಚಾಲಯ ಮಕ್ಕಳೇ ತೊಳಿಬೇಕಾ"

### 2ನೇ ತರಗತಿ ಮಗುವಿನ ಬೆನ್ನಿಗೆ ಆಸಿಡ್ ಬಿದ್ದು ಜಿಲ್ಲಾಸ್ಪತ್ರೆಗೆ



**ಚಿತ್ರದುರ್ಗ:** ತಾಲೂಕಿನ ಜೋಡಿ ಚಿಕ್ಕೇನಹಳ್ಳಿ ಗೊಲ್ಲರಹಟ್ಟಿ ಪ್ರಾಥಮಿಕ ಶಾಲೆಯ ಎರಡನೇ ತರಗತಿ ವಿದ್ಯಾರ್ಥಿನಿ ಸಿಂಚನಾ ಬೆನ್ನ ಮೇಲೆ ಶಿಕ್ಷಕರ ನಿರ್ಲಕ್ಷ್ಯದಿಂದ ಆಸಿಡ್ ಸುಟ್ಟ ಪರಿಣಾಮವಾಗಿ ಚಿಕಿತ್ಸೆಗಾಗಿ ಜಿಲ್ಲಾಸ್ಪತ್ರೆಗೆ ದಾಖಲಿಸಲಾಗಿದೆ.

ಜೋಡಿಚಿಕ್ಕೆನಹಳ್ಳಿ ಗ್ರಾಮಸ್ಥರ ಪ್ರಕಾರ ವಿದ್ಯಾರ್ಥಿಗಳನ್ನುಸ್ವಚ್ಛಗೊಳಿಸಲುಬಳಸಿಕೊಂಡಿದ್ದು ಶಾಲೆಯ ಶೌಚಾಲಯಗಳನ್ನು ತೊಳೆಯುವ ಸಂದರ್ಭದಲ್ಲಿ ಹೆಡ್ ಮಾಸ್ಟರ್ ರಂಗಸ್ವಾಮಿ ಮಗುವಿನ ಬೆನ್ನ ಮೇಲೆ ಆಸಿಡ್ ಹಾಕಿದ್ದಾರೆ ಎಂಬುದು ಪೋಷಕರ ಆರೋಪವಾಗಿದೆ.

> ಶೌಚಾಲಯ ಸ್ವಚ್ಚಗೊಳಿಸುವ ಸಂದರ್ಭದಲ್ಲಿ ಈ ಘಟನೆ ನಡೆದಿದೆ.ಮಗುವಿನ ಬೆನ್ನ ಮೇಲೆ ಸುಟ್ಟ ಗಾಯಗಳಾಗಿವೆ.ಆಸಿಡ್ ಬಿದ್ದಿರುವುದು ದೃಢವಾಗಿದೆ. ಮುಖ್ಯೋಪಾಧ್ಯಾಯ ವಿರುದ್ಧ ಪೋಷಕರು ವರ್ಗಾವಣೆ ಮಾಡಲು ಒತ್ತಾಯಿಸಿದ್ದಾರೆ.ಪೋಷಕರ ಹೇಳಿಕೆ ಮತ್ತು ಸಂಪೂರ್ಣ ಮಾಹಿತಿ ಪಡೆದು ಕಾನೂನು ಕ್ರಮ ಜರುಗಿಸಲಾಗುತ್ತದೆ.
>
> » **ಎಸ್.ನಾಗಭೂಷಣ್ ಕ್ಷೇತ್ರ ಶಿಕ್ಷಣಧಿಕಾರಿಗಳು ಚಿತ್ರದುರ್ಗ**




## ಫಾಸ್ಟ್ ನ್ಯೂಸ್

### ಏನ್ರಿ ಮೇಷ್ಟ್ರೆ ಶೌಚಾಲಯ ಮಕ್ಕಳೇ ತೊಳಬೇಕಾ"



» ಮೊದಲ ಪುಟದಿಂದ

ಈ ಘಟನೆ ಆಕಸ್ಮಿಕವಾಗಿ ನಡೆದಿದೆ ಎಂದರು ಸಹ ಸಿಂಚನಾ ಎಂಬ ಮಗುವಿನ ಬೆನ್ನಿನ ಮೇಲೆ ಆಸಿಡ್ ಬಿದ್ದ ನಂತರ ಗುಳ್ಳೆಗಳಾಗಿ ತೀವ್ರ ಗಾಯಗಳಾಗಿವೆ.

ವಿಷಯದ ಗಂಭೀರತೆ ಅರಿತ ಗ್ರಾಮಸ್ಥರು ದೌಡಾಯಿಸಿದರು ಸುಟ್ಟು ಗಾಯಗೊಂಡ ಬಾಲಕಿಯನ್ನು ಚಿಕಿತ್ಸೆಗಾಗಿ ಜಿಲ್ಲಾಸ್ಪತ್ರೆಗೆ ದಾಖಲಿಸಿದ್ದಾರೆ ಎಂದು ತಿಳಿದು ಬಂದಿದೆ

ಮುಖ್ಯೋಪಾಧ್ಯಾಯರು ನಿರ್ಲಕ್ಷ್ಯ ವಹಿಸಿದ್ದಾರೆ ಎಂದು ಗ್ರಾಮಸ್ಥರು ಆರೋಪಿಸಿದ್ದು ಅವರ ನಿರ್ಲಕ್ಷ್ಯ ನೇರವಾಗಿ ಈ ಅವಘಡ ಸಂಭವಿಸಿದೆ.

ಈ ವಿಷಯ ಮಾಹಿತಿ ಪಡೆದು ಚಿತ್ರದುರ್ಗ ಜಿಲ್ಲಾ ಡಿಡಿಪಿಐ ಕೆ.ರವಿಶಂಕರ್ ರೆಡ್ಡಿ ನಿರ್ದೇಶನ ಸೂಚನೆಯಂತೆ ಬಿಇಒ ನಾಗಭೂಷಣ ಅವರು ಕೂಡಲೇ ಆಸ್ಪತ್ರೆಗೆ ಭೇಟಿ ನೀಡಿ ಖಾತ್ರಿಪಡಿಸಿಕೊಂಡರು. ವೈದ್ಯರ ಜೊತೆ ಮಾತನಾಡಿ ಮಗುವಿನ ಪೋಷಕರಿಗೆ ಧೈರ್ಯ ತಂಬಿದರು. ಮಗುವಿಗೆ ಸೂಕ್ತ ಚಿಕಿತ್ಸೆ ನೀಡುತ್ತಿದ್ದು ಅದಷ್ಟು ಬೇಗ ಗುಣಮುಖವಾಗಲಿ ಎಂದರು.

> ನಮ್ಮ ಕ್ಷೇತ್ರ ಶಿಕ್ಷಣಧಿಕಾರಿಗಳು ಜಿಲ್ಲಾ ಆಸ್ಪತ್ರೆಗೆ ಭೇಟಿ ನೀಡಿ ಮಾಹಿತಿ ಪಡೆದಿದ್ದಾರೆ.ಸ್ಥಳದಲ್ಲಿನ ವರದಿ ಮತ್ತು ಶಿಕ್ಷಕರು ಕುರಿತು ಅವರು ನೀಡಿದ ವರದಿಯನ್ನು ಆಧರಿಸಿ ಸೂಕ್ತ ಕಾನೂನು ರೀತಿ ಕ್ರಮ ಜರುಗಿಸಲಾಗುತ್ತದೆ.
>
> » **ರವಿಶಂಕರ್ ರೆಡ್ಡಿ ಉಪ ನಿರ್ದೇಶಕರು ಸಾರ್ವಜನಿಕರ ಶಿಕ್ಷಣ ಇಲಾಖೆ**

### ಹೊಸ ಸುತ್ತೋಲೆ

» ಮೊದಲ ಪುಟದಿಂದ

**ಸುತ್ತೋಲೆಯ ವಿವರಗಳು;** ರೈತರು ವ್ಯವಸಾಯದ ಉದ್ದೇಶಗಳಿಗಾಗಿ ತಿರುಗಾಡಲು ಬಳಸುವ ಖಾಸಗಿ ಜಮೀನುಗಳಲ್ಲಿ ಕಾಲುದಾರಿ, ಬಂಡಿದಾರಿ ಅಥವಾ ಸೌಲಭ್ಯ ಒದಗಿಸುವ ಸಲುವಾಗಿ ಕ್ರಮವಹಿಸುವ ಕುರಿತು ಎಂಬ ವಿಷಯವನ್ನು ಸುತ್ತೋಲೆ ಒಳಗೊಂಡಿದೆ. ರಾಜ್ಯದಲ್ಲಿ ರೈತರು ವ್ಯವಸಾಯದ ಉದ್ದೇಶಗಳಿಗಾಗಿ ಬಳಸುವ ಕೃಷಿ ಸಲಕರಣೆಗಳನ್ನು ಸಾಗಿಸಲು ಅನ್ಯ ಭೂಮಾಲೀಕರ ಖಾಸಗಿ ಜಮೀನುಗಳಲ್ಲಿ ತಿರುಗಾಡಲು 'ದಾರಿ' ಸಮಸ್ಯೆ ಇದ್ದು, ಬಳಕೆದಾರ ರೈತರುಗಳಿಗೆ ತೊಂದರೆಗಳಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆ ಎಂದು ಸುತ್ತೋಲೆ ಹೇಳಿದೆ. 'ದಾರಿ' ಸಮಸ್ಯೆ ಬಹುಕಾಲದಿಂದಲೂ ಇದ್ದು, ಅಕ್ಕಪಕ್ಕದ ಜಮೀನುಗಳ ರೈತರು ಕೆಲವು ಖಾಸಗಿ ಜಮೀನುಗಳನ್ನು ದಾಟಿಕೊಂಡು ಕೃಷಿ ಪೂರಕ ಚಟುವಟಿಕೆಗಳನ್ನು ಜರುಗಿಸಲು ಹಾಗೂ ಬೆಳೆದ ಫಸಲನ್ನು ಹೊರತರಲಾಗದೆ ನಷ್ಟ ಹೊಂದುತ್ತಿರುವುದು ಕೆಲವು ಮಾಧ್ಯಮಗಳಿಂದ ತಿಳಿದು ಬಂದಿರುತ್ತದೆ ಹಾಗೂ ಈ ಬಗ್ಗೆ ಸಾರ್ವಜನಿಕರಿಂದ ಮನವಿ/ ದೂರುಗಳು ಸ್ವೀಕೃತವಾಗಿರುತ್ತವೆ. ಗ್ರಾಮ ನಕಾಶೆ ಕಂಡ ದಾರಿಗಳಲ್ಲಿ ಬಳಕೆದಾರ ರೈತರು ತಿರುಗಾಡಲು ಅವಕಾಶವಿದ್ದಾಗ್ಯೂ, ಕೆಲವು ಭೂಮಾಲೀಕರು ಬಳಕೆದಾರ ರೈತರುಗಳಿಗೆ ತಿರುಗಾಡಲು ಅಡ್ಡಿಪಡಿಸುತ್ತಿರುವುದು ಅಥವಾ ಅಂತಹ ಜಾಗಗಳನ್ನು ಮುಚ್ಚಿರುವುದು ಹಾಗೂ ರೈತರು ಬಹುಕಾಲದಿಂದಲೂ ಬಳಸುವ ದಾರಿಗಳಲ್ಲಿ ತಿರುಗಾಡಲು ಕೆಲವು ರೈತರ ಮಧ್ಯದ ವೈಯಕ್ತಿಕ ದ್ವೇಷ/ ಅಸೂಯೆಗಳು ಮತ್ತು ಹೊಂದಾಣಿಕೆಯ ಕೊರತೆಯಿಂದಾಗಿ ಬಳಕೆದಾರ ರೈತರ ತೊಂದರೆಗಳಿಗೆ ಬಹುತೇಕ ಕಾರಣಗಳಾಗಿರುವುದು ಕಂಡುಬರುತ್ತದೆ ಎಂದು ವಿವರಿಸಿದೆ.ಕರ್ನಾಟಕ ಭೂ ಕಂದಾಯ ನಿಯಮಗಳು, 1966ರ ನಿಯಮ 59 ರಲ್ಲಿ 'ದಾರಿಯ ಹಕ್ಕುಗಳು ಮತ್ತು ಇತರೆ ಅನುಭೋಗದ ಹಕ್ಕುಗಳ ಬಗ್ಗೆ ತಿಳಿಸಲಾಗಿದ್ದು, ಸಂಬಂಧಪಟ್ಟ ಜಮೀನುಗಳ ಭಾಗಿದಾರರು ಒಪ್ಪಿರುವಂತಹ ಸಂದರ್ಭದಲ್ಲಿ ಹಕ್ಕುಗಳ ದಾಖಲೆ ರಿಜಿಸ್ಟರ್‌ನಲ್ಲಿ ನಮೂದು ಮಾಡಲು ಅವಕಾಶವಿದೆ. The Indian Easement Act, 1882ರಂತೆ ಪ್ರತಿ ಜಮೀನಿನ ಮಾಲೀಕರು ಅಥವಾ ಜಮೀನಿನ ಅನುಭವದಲ್ಲಿರುವವರು ಅವರ ಭೂಮಿಯನ್ನು ಪ್ರವೇಶಿಸುವ ಹಕ್ಕು ಮತ್ತು ವಹಿವಾಟಿನ ಹಕ್ಕನ್ನು ಹೊಂದಿದ್ದು, ಇದಕ್ಕೆ ಬಾಜುದಾರರಿಂದ ಯಾವುದೇ ಹಸ್ತಕ್ಷೇಪಕ್ಕೆ ಅಥವಾ ಈ ಬಗ್ಗೆ ಸದರಿ ಹಕ್ಕನ್ನು ಕ್ಷೀಣಿಸುವುದಕ್ಕೆ ಸಾಧ್ಯವಿರುವುದಿಲ್ಲ ಎಂಬುದಾಗಿ ತಿಳಿಸಲಾಗಿದ್ದು, ಈ ನಿಟ್ಟಿನಲ್ಲಿ ಕ್ರಮವಹಿಸಲು ಅವಕಾಶವಿದೆ. ಅಲ್ಲದೇ, Code of Criminal Procedure, 19730 00 147 ರನ್ವಯ 'ಭೂಮಿ ಮತ್ತು ನೀರಿನ ಹಕ್ಕಿನ ಉಪಯೋಗದ' ಕುರಿತು ಸ್ಥಳೀಯ ಶಾಂತಿಗೆ ಭಂಗ ಉಂಟಾಗುವ ಸಂದರ್ಭಗಳಲ್ಲಿ ಅದನ್ನು ನಿವಾರಿಸಲು ಕಾನೂನು ರೀತ್ಯಾ ತಹಶೀಲ್ದಾರ್ ರವರು ತಾಲ್ಲೂಕು ಕಾರ್ಯನಿರ್ವಾಹಕ ಮ್ಯಾಜಿಸ್ಟ್ರೇಟ್ ಆಗಿ ಕ್ರಮವಹಿಸುವ ಅಧಿಕಾರ ಹೊಂದಿರುತ್ತಾರೆ. ಅದರಂತೆ, ತಾಲ್ಲೂಕಿನ ತಹಶೀಲ್ದಾರ್‌ಗಳು ನಕಾಶೆ ಕಂಡ ಕಾಲುದಾರಿ, ಬಂಡಿದಾರಿ ಅಥವಾ ರಸ್ತೆಗಳಲ್ಲಿ ಅನ್ಯ ಕೃಷಿ ಬಳಕೆದಾರರು ತಿರುಗಾಡಲು ಅವಕಾಶ ನೀಡದೆ ಅಡ್ಡಿಪಡಿಸುವಂತಹ ಅಥವಾ ಬಳಸಲು ಮುಚ್ಚಿರುವಂತಹ ಸಂದರ್ಭದಲ್ಲಿ ಅವುಗಳನ್ನು ತೆರವುಗೊಳಿಸಿ ಅಂತಹ ತಿರುಗಾಡಲು ದಾರಿಗಳನ್ನು ಸುಗಮಗೊಳಿಸಲು ಕ್ರಮವಹಿಸುವಂತೆ ಸೂಚಿಸಿದೆ ಎಂದು ಸುತ್ತೋಲೆ ತಿಳಿಸಿದೆ.

### ಬೆಳವನೂರು ಗ್ರಾಮದಲ್ಲಿ ಜನತಾ ದರ್ಶನ; ಸರ್ಕಾರಿ ಸೌಲಭ್ಯ ಕಲ್ಪಿಸಿ: ಶಾಮನೂರು ಶಿವಶಂಕರಪ್ಪ

# ಜನರ ಕುಂದುಕೊರತೆ ಆಲಿಸಿ ಸ್ಥಳದಲ್ಲೇ ಪರಿಹರಿಸಿ

» **ದಾವಣಗೆರೆ**

ಜನರು ಸರ್ಕಾರಿ ಕಚೇರಿಗಳಿಗೆ ಅಲೆದಾಡುವ ಬದಲು ಅಧಿಕಾರಿಗಳೇ ಮನೆ ಬಾಗಿಲಿಗೆ ಭೇಟಿ ನೀಡಿ ಸಮಸ್ಯೆಗಳನ್ನು ಆಲಿಸಿ, ಸ್ಥಳದಲ್ಲೆ ಪರಿಹರಿಸಿ, ಸೌಲಭ್ಯ ಕಲ್ಪಿಸಲು ಜನತಾ ದರ್ಶನ ಸಹಕಾರಿಯಾಗಿದೆ ಎಂದು ದಾವಣಗೆರೆ ದಕ್ಷಿಣ ವಿಧಾನ ಸಭಾ ಕ್ಷೇತ್ರದ ಶಾಸಕರಾದ ಡಾ. ಶಾಮನೂರು ಶಿವಶಂಕರಪ್ಪ ತಿಳಿಸಿದರು.

ಬುಧವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ವಿವಿಧ ಇಲಾಖೆಗಳ ಸಹಯೋಗದೊಂದಿಗೆ ದಾವಣಗೆರೆ ತಾಲ್ಲೂಕಿನ ಬೆಳವನೂರು ಗ್ರಾಮದಲ್ಲಿ ಏರ್ಪಡಿಸಲಾದ ಜಿಲ್ಲಾ ಮಟ್ಟದ ಜನತಾ ದರ್ಶನ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಜನರು ಸರ್ಕಾರದ ಸೌಲಭ್ಯಗಳಿಗಾಗಿ ಕಚೇರಿ ಅಲೆಯುವುದನ್ನು ತಪ್ಪಿಸಬೇಕೆಂದು ಮತ್ತು ಸಣ್ಣ, ಸಣ್ಣ ಸಮಸ್ಯೆಗೂ ತಾಲ್ಲೂಕು, ಜಿಲ್ಲಾ ಹಾಗೂ ರಾಜ್ಯ ಮಟ್ಟದವರೆಗೂ ಅಲೆಯಬೇಕಾದ ಸ್ಥಿತಿಯನ್ನು ತಪ್ಪಿಸುವ ಉದ್ದೇಶದಿಂದ ಸರ್ಕಾರ ಪ್ರತಿ 15 ದಿನಗಳಿಗೊಮ್ಮೆ ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದಲ್ಲಿ ಜನತಾ ದರ್ಶನ ನಡೆಸಿ ಜನರ ಸಮಸ್ಯೆಗಳನ್ನು ಆಲಿಸಿ ಸ್ಥಳದಲ್ಲಿಯೇ ಬಗೆಹರಿಸಿಪರಿಹಾರಕಂಡುಕೊಳ್ಳಲಾಗುತ್ತದೆ ಎಂದರು.

ಜನರ ಸಮಸ್ಯೆಗಳನ್ನು ಆಲಿಸಿ ಸ್ಥಳದಲ್ಲಿಯೇ ಪರಿಹರಿಸುವುದರಿಂದ ಜನರ ಸಮಯ, ಖರ್ಚು-ವೆಚ್ಚ ಉಳಿತಾಯವಾಗಿ ಸರ್ಕಾರದ ಬಗ್ಗೆ ವಿಶ್ವಾಸ ಮೂಡುತ್ತದೆ ಎಂದರು.

ಬೆಳವನೂರು ಗ್ರಾಮದಲ್ಲಿ ನಡೆದ ಜನತಾ ದರ್ಶನಕ್ಕೂ ಮುಂಚಿತವಾಗಿ ಪ್ರತಿ ಮನೆಗೂ






ಭೇಟಿ ನೀಡಿ ಎಲ್ಲರ ಕುಂದುಕೊರತೆಗಳನ್ನು ಆಲಿಸಿ ಇ-ಸ್ವತ್ತಿನ ಸಮಸ್ಯೆ, ಶೌಚಾಲಯ, ಪಿಂಚಣಿ, ಗೃಹಲಕ್ಷ್ಮೀ ಸಮಸ್ಯೆ ಸೇರಿದಂತೆ 442 ಅರ್ಜಿಗಳನ್ನು ಸ್ವೀಕರಿಸಲಾಗಿದ್ದು ಶೀಘ್ರವೇ ಪರಿಹರಿಸಲಾಗುತ್ತದೆ ಎಂದರು.

ನಮ್ಮ ಸರ್ಕಾರ ಮಹಿಳಾ ಸಬಲೀಕರಣದ ಉದ್ದೇಶದಿಂದ ಮನೆ ಯಜಮಾನಿಗೆ ಮಾಸಿಕ ರೂ.2000 ನೀಡುತ್ತಿದ್ದು, ಹಣ ಬಾರದಿರುವ ಫಲಾನುಭವಿಗಳನ್ನು ಗುರುತಿಸಿ ಶೀಘ್ರವೇ ತಾಂತ್ರಿಕ ಸಮಸ್ಯೆಯನ್ನು ಪರಿಹರಿಸಲಾಗುತ್ತದೆ ಎಂದರು.

ಜಿಲ್ಲಾಧಿಕಾರಿ ಡಾ. ವೆಂಕಟೇಶ್ ಎಂ.ವಿ ಮಾತನಾಡಿ ಜನರಿಂದ, ಜನರಿಗೋಸ್ಕರ, ಜನರಿಗಾಗಿ ಮಾಡುತ್ತಿರುವ ಈ ಜನತಾ ದರ್ಶನ ಕಾರ್ಯಕ್ರಮದ ಮೂಲ ಉದ್ದೇಶ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಅಧಿಕಾರಿಗಳು ಜನಸಾಮಾನ್ಯರ ಸಮಸ್ಯೆಗಳಿಗೆ ಸ್ಪಂದಿಸಿ ಸ್ಥಳದಲ್ಲೇ ಪರಿಹಾರ ನೀಡುವುದಾಗಿದೆ ಎಂದರು.

ಈ ಬಾರಿಯ ಜನತಾದರ್ಶನ ಅತ್ಯಂತ ವಿನೂತನವಾದದ್ದು ಹಾಗೂ ವಿಶೇಷತೆಯನ್ನು ಹೊಂದಿದೆ. ಕೇವಲ ಕಾರ್ಯಕ್ರಮದಲ್ಲಿ ಅರ್ಜಿಗಳನ್ನು ಸ್ವೀಕರಿಸುತ್ತಿರುವುದಲ್ಲದೇ, ಕಳೆದ ಮೂರು ದಿನಗಳಿಂದ ಗ್ರಾಮದಲ್ಲಿನ ಮನೆಗಳಿಗೆ ಭೇಟಿ ನೀಡಿ, ಜನರನ್ನು ಸಂಪರ್ಕಿಸಿ ಅವರ ಸಮಸ್ಯೆಗಳನ್ನು ಆಲಿಸಲಾಗುತ್ತಿದೆ. ಕಂದಾಯ, ಕೃಷಿ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ಆಹಾರ ಇಲಾಖೆಗೆ ಸಂಬಂಧಿಸಿದಂತೆ ಅನೇಕ ಅರ್ಜಿಗಳು ಸ್ವೀಕಾರಗೊಂಡಿದ್ದು, ಈಗಾಗಲೇ ಗ್ರಾಮದ ಶೇ.50 ರಷ್ಟು ಸಮಸ್ಯೆಗಳನ್ನು ಬಗೆಹರಿಸಲಾಗಿದೆ ಎಂದರು.

ಗ್ರಾಮದ ಪ್ರಮುಖ ಬೇಡಿಕೆಯಾದ ಗ್ರಾಮ ಠಾಣಾಕ್ಕೆ ನೀಲ ನಕ್ಷೆಯನ್ನು ಸಿದ್ಧಪಡಿಸಲಾಗಿದೆ. ಗ್ರಾಮಕ್ಕೆ ಸ್ಮಶಾನ ಬೇಕು ಎಂಬ ಬೇಡಿಕೆಗೆ ಈಗಾಗಲೇ ಜಾಗವನ್ನು ಗುರುತಿಸಲಾಗಿದೆ. ದನದ ಕೊಟ್ಟಿಗೆ, ಶೌಚಾಲಯ ವ್ಯವಸ್ಥೆ, ಚರಂಡಿ ಸ್ವಚ್ಛಗೊಳಿಸುವಿಕೆ, ಜಿಲ್ಲಾ ಪಂಚಾಯತಿಗೆ ಸಂಬಂಧಿಸಿದಂತೆ ಅನೇಕ ಸಮಸ್ಯೆಗಳನ್ನು ಪರಿಹರಿಸಲಾಗುತ್ತದೆ ಎಂದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸುರೇಶ್ ಇಟ್ನಾಳ್ ಮಾತನಾಡಿ ಸರ್ಕಾರದ ನಿರ್ದೇಶನದಂತೆ ಆಡಳಿತವನ್ನು ಜನರ ಮನೆ ಬಾಗಿಲಿಗೆ ಕೊಂಡೊಯ್ದು, ಜನರ ಸಮಸ್ಯೆಗಳನ್ನು ಸ್ಥಳೀಯ ಹಂತದಲ್ಲೇ ಪರಿಹರಿಸುವ ಮೂಲಕ ಕಚೇರಿಗಳಿಗೆ ಅಲೆದಾಡುವುದನ್ನು ತಪ್ಪಿಸುವ ನಿಟ್ಟಿನಲ್ಲಿ ಜನತಾ ದರ್ಶನ ಕಾರ್ಯಕ್ರಮ ಸಹಕಾರಿಯಾಗಲಿದೆ. ಬೆಳವನೂರು ಗ್ರಾಮ ಪಂಚಾಯಿತಿಯಲ್ಲಿ ಶೌಚಾಲಯ, ಕುಡಿಯುವ ನೀರಿನ ಸಮಸ್ಯೆ ಹಾಗೂ ಚರಂಡಿ ವ್ಯವಸ್ಥೆ ಸೇರಿದಂತೆ 120 ಅರ್ಜಿಗಳನ್ನು ಸ್ವೀಕರಿಸಲಾಗಿದ್ದು ಶೀಘ್ರವೇ ಪರಿಹರಿಸಲಾಗುತ್ತದೆ ಎಂದರು.

ವಸ್ತು ಪ್ರದರ್ಶನ ಮತ್ತು ಆರೋಗ್ಯ ಮೇಳ; ಜನತಾ ದರ್ಶನದ ಅಂಗವಾಗಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಿಂದ ಪೋಷಣ್ ಅಭಿಯಾನ, ಎನ್.ಆರ್.ಎಲ್.ಎಂ. ಸ್ವಸಹಾಯ ಗುಂಪುಗಳು ಉತ್ಪಾದಿಸಿದ ವಸ್ತುಗಳ ಪ್ರದರ್ಶನ, ಆರೋಗ್ಯ ಇಲಾಖೆಯಿಂದ ಆರೋಗ್ಯ ಶಿಬಿರ, ತೋಟಗಾರಿಕೆ, ಕೃಷಿ, ಬೆಸ್ಕಾಂ ಸೇರಿದಂತೆ ವಿವಿಧ ಇಲಾಖೆಗಳ ಮಳಿಗೆ ನಿರ್ಮಾಣ ಮಾಡಿ ಸಾರ್ವಜನಿಕರಿಗೆ ಅರಿವು ಮೂಡಿಸಲಾಯಿತು.

ಕಾರ್ಯಕ್ರಮದಲ್ಲಿ ಗ್ರಾಮ ಪಂಚಾಯಿತಿ ಅಧ್ಯಕ್ಷೆ ಹೂವ್ವಮ್ಮ, ಉಪ ವಿಭಾಗಾಧಿಕಾರಿ ದುರ್ಗಾಶ್ರೀ, ದಾವಣಗೆರೆ ತಾಲ್ಲೂಕು ತಹಶಿಲ್ದಾರ್ ಡಾ. ಅಶ್ವತ್ ಎಂ.ಬಿ, ಗ್ರಾಮ ಪಂಚಾಯಿತಿ ಉಪಾಧ್ಯಕ್ಷ ನವೀನ್ ಕುಮಾರ್ ಹಾಗೂ ವಿವಿಧ ಇಲಾಖೆ ಅಧಿಕಾರಿಗಳು, ಮುಖಂಡರು ಉಪಸ್ಥಿತರಿದ್ದರು.

# ತೋಟಗಾರಿಕೆ ಪಿತಾಮಹ ಡಾ.ಮರೀಗೌಡ ಪುತ್ಥಳಿ ಅನಾವರಣ

### ಕರ್ನಾಟಕದ ತೋಟಗಾರಿಕೆ ಕ್ಷೇತ್ರದ ಅಭಿವೃದ್ಧಿಯ ರೂವಾರಿ: ಸಿಎಂ

» **ಮೈಸೂರು**

ತೋಟಗಾರಿಕೆ ಪಿತಾಮಹ ಡಾ.ಎಂ.ಹೆಚ್.ಮರೀಗೌಡ ಅವರ ಕಾಲದಲ್ಲಿ ಕರ್ನಾಟಕದಲ್ಲಿ ತೋಟಗಾರಿಕಾ ಕ್ಷೇತ್ರ ಅಭಿವೃದ್ಧಿಯ ರೂವಾರಿಯಾಗಿದ್ದರು. ಸರ್ಕಾರಿ ಅಧಿಕಾರಿಯಾಗಿ ನಿಷ್ಠೆ ಹಾಗೂ ಬದ್ಧತೆಯಿಂದ ತೋಟಗಾರಿಕೆ ಕ್ಷೇತ್ರದ ಬೆಳವಣಿಗೆಗೆ ಶ್ರಮಿಸಿದರು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ಅವರು ಇಂದು ತೋಟಗಾರಿಕೆ ಪಿತಾಮಹ ಡಾ.ಎಂ.ಹೆಚ್.ಮರೀಗೌಡ ಪ್ರತಿಮೆ ಅನಾವರಣಗೊಳಿಸಿ ಮಾಧ್ಯಮದವರೊಂದಿಗೆ ಮಾತನಾಡಿದರು.

ಮೈಸೂರಿನ ಕೇಂದ್ರಸ್ಥಳದಲ್ಲಿರುವ ಕರ್ಜನ್ ಪಾರ್ಕ್ ನಲ್ಲಿ ಡಾ.ಎಂ.ಹೆಚ್. ಮರೀಗೌಡರ ಕಂಚಿನ ಪ್ರತಿಮೆಯನ್ನು ಅನಾವರಣಗೊಳಿಸಲಾಗಿದೆ. ಡಾ.ಎಂ. ಹೆಚ್.ಮರೀಗೌಡರ ಸಾಧನೆಗಳು ಎಲ್ಲರಿಗೂ ಸ್ಪೂರ್ತಿ ತರಲಿದೆ ಎಂದು ತಿಳಿಸಿದರು

**ಮಾಹಿತಿ ಪಡೆದು ಪರಿಶೀಲನೆ :** ಹುಲಿ ಉಗುರು ಧರಿಸಿದ ಬಗ್ಗೆ ನಟರಾದ ದರ್ಶನ್ ಹಾಗೂ ಜಗ್ಗೇಶ್ ಅವರ ಪ್ರಕರಣ ದಾಖಲಾಗಿರುವ ಬಗ್ಗೆ ಪತ್ರಕರ್ತರ ಪ್ರಶ್ನೆಗೆ ಉತ್ತರಿಸುತ್ತಾ, ಈ ಬಗ್ಗೆ ಸಂಪೂರ್ಣ ಮಾಹಿತಿ ಇಲ್ಲ. ಪೊಲೀಸ್ ಇಲಾಖೆಯಿಂದ ಮಾಹಿತಿ ಪಡೆದು ಪರಿಶೀಲಿಸಲಾಗುವುದು ಎಂದು ತಿಳಿಸಿದರು.






ಕನಕ ಫೋಟೋಗ್ರಫಿ ಅಂಡ್ ಇವೆಂಟ್ಸ್ 2 ನೇ ಮೇನ್ 2 ಕ್ರಾಸ್ ವಿನೋಬನಗರ ದಲ್ಲಿ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಹಾಗೂ ದಾವಣಗೆರೆ ಜಿಲ್ಲಾ ಉಸ್ತುವಾರಿ ಸಚಿವರು ಶ್ರೀ ಎಸ್ ಎಸ್ ಮಲ್ಲಿಕಾರ್ಜುನ್ ರವರು ಸ್ಟುಡಿಯೋ ಉದ್ಘಾಟಿಸಿದರು ಈ ಸಂದರ್ಭದಲ್ಲಿ ಮಾಲೀಕರಾದ ಎಂ.ಮನು ಮಹಾನಗರ ಪಾಲಿಕೆ ಸದಸ್ಯರಾದ ಗಡಿಗುಡಾಳ ಮಂಜುನಾಥ , ಪಂಚಣ್ಣ,ಸಂತೋಷ್ ದೊಡ್ಮನಿ,ಜಿ ಮಾಲಿಂಗಪ್ಪ, ಚೌಡಪ್ಪ, ಚಂದ್ರ ಮೌಳಿ ಚನ್ನಬಸವ ಶೀಲವಂತ , ಕೆ ಸಿ ಉಮೇಶ್ , ಇನ್ನಿತರರು ಉಪಸ್ಥಿತರಿದ್ದಾರೆ



ನವರಾತ್ರಿ ಪ್ರಯುಕ್ತ ಬರಗೇರಮ್ಮ ದೇವಸ್ಥಾನದಲ್ಲಿ ಶ್ರಮಜೀವಿ ಕಟ್ಟಡ ಮತ್ತು ಕೂಲಿ ಕಾರ್ಮಿಕರ ಸೇವಾ ಪಡೆಯಿಂದ ಪ್ರಸಾದ ವಿತರಣೆ.

## ಪ್ರಮುಖ ಸುದ್ದಿ

# ಹೆಚ್‌ಡಿಕೆ ರಾಜಕೀಯ ಖಳನಾಯಕ: ಸಿಎಂ ಸಿದ್ದರಾಮಯ್ಯ

» ಮೊದಲ ಪುಟದಿಂದ

ಕುರುಡರು, ಹೆಳವರ ರೀತಿ ಒಬ್ಬರಿಗೊಬ್ಬರು ಅವಲಂಬಿತರಾಗಿದ್ದಾರೆ ಎಂದರು.

**ಚುನಾವಣೆ ಪ್ರಯುಕ್ತ ಯಾವ ರಾಜ್ಯಗಳಿಗೂ ಹಣ ಕೊಟ್ಟಿಲ್ಲ:** ಹೈ ಕಮಾಂಡಿಗೆ ದೂರು ನೀಡುವ ಬಗ್ಗೆ ಪ್ರತಿಕ್ರಿಯೆ ನೀಡಿ ಪಂಚ ರಾಜ್ಯಗಳ ಚುನಾವಣೆ ಬಂದಿರುವುದರಿಂದ ನೆಪಮಾಡಿಕೊಂಡು ಸುಳ್ಳು ಹೇಳುತ್ತಾರೆ. ಇಂದಿನವರೆಗೆ ನಾವು ಯಾವ ರಾಜ್ಯಗಳಿಗೂ ಹಣ ಕೊಟ್ಟಿಲ್ಲ. ಅದಕ್ಕಾಗಿ ಯಾರ ಬಳಿಯೂ ಹಣ ಕೇಳಿಲ್ಲ ಎಂದು ಸ್ಪಷ್ಟಪಡಿಸಿದರು.

**ವಿದ್ಯುತ್ ಕ್ಷಾಮ: ಕೃತಕ ಅಭಾವವಲ್ಲ:** ವಿದ್ಯುತ್ ಕ್ಷಾಮ ನೀಗಿಸಲು ಹೊರಗಿನಿಂದ ವಿದ್ಯುತ್ ಕೊಳ್ಳುವುದು, ಎಲ್ಲಾ ಸಕ್ಕರೆ ಕಾರ್ಖಾನೆ ಗಳು ಪ್ರಾರಂಭವಾಗುತ್ತಿದ್ದು, ಅಲ್ಲಿ ಕೋಜನರೇಷನ್ ಆಗುತ್ತದೆ. ಅದರಿಂದಕೊಂಡುಕೊಳ್ಳುತ್ತೇವೆ.ರಾಜ್ಯದಲ್ಲಿ ವಿದ್ಯುತ್ ಉತ್ಪಾದನೆ ಮಾಡುವ ಖಾಸಗಿ ಸಂಸ್ಥೆಗಳು ರಾಜ್ಯಕ್ಕೆ ನೀಡಬೇಕೆಂದು ಆದೇಶ ಹೊರಡಿಸಿದ್ದೇವೆ ಎಂದರು.

ಹೆಚ್.ಡಿ.ಕುಮಾರಸ್ವಾಮಿ ಅವರು ಹೇಳುವಂತೆ ಇದು ಕೃತಕವಾಗಿ ಆಗಿರುವ ಅಭಾವವಲ್ಲ. 2 ಬಾರಿ ಮುಖ್ಯಮಂತ್ರಿಯಾದವರು ಸತ್ಯ ಮರೆಮಾಚಿ ಸುಳ್ಳು ಹೇಳುತ್ತಿದ್ದಾರೆ.

**ಬೆಂಗಳೂರಿಗೆ ರಾಮನಗರ ಸೇರ್ಪಡೆ ಹೇಳಿಕೆ: ಡಿಸಿಎಂ ಜೊತೆ ಚರ್ಚೆ:** ರಾಮನಗರವನ್ನು ಬೆಂಗಳೂರಿಗೆ ಸೇ ರ್ಪಡೆ ಮಾಡುವ ಬಗ್ಗೆ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರ ಹೇಳಿಕೆ ಕುರಿತು ಪ್ರತಿಕ್ರಿಯೆ ನೀಡಲು ನಿರಾಕರಿಸಿದ ಮುಖ್ಯಮಂತ್ರಿಗಳು ಈ ಪ್ರಶ್ನೆಯನ್ನು ಅವರನ್ನೇ ಕೇಳಿ ಎಂದರು.ಈ ಬಗ್ಗೆ ನನಗೆ ಗೊತ್ತಿಲ್ಲ. ನಾನು ಈ ಬಗ್ಗೆ ಅವರ ಬಳಿ ಚರ್ಚೆ ಮಾಡುತ್ತೇನೆ ಎಂದರು.

**ಬಿಜೆಪಿಗೆ ಮಾನ , ಮರ್ಯಾದೆ ಇದೆಯೇ:** ಬಿಜೆಪಿ ಎಟಿಎಂ ಸರ್ಕಾರ ಎಂದು ಟ್ವೀಟ್ ಮಾಡಿರುವ ಬಗ್ಗೆ ಪ್ರತಿಕ್ರಿಯೆ ನೀಡಿ ಅದು ಸುಳ್ಳು ಆರೋಪ. ಆಪರೇಷನ್ ಕಮಲ ಕೈಗೊಂಡು 25 ಕೋಟಿ ಹಣ ನೀಡಿ, 25.ಕೋಟಿ ಚುನಾವಣೆ ಗೆ ಖರ್ಚು ಮಾಡಲು ಹಣ ಎಲ್ಲಿಂದ ಬಂತು. ಇವರಿಗೆ ಏನಾದರೂ ಮಾನ , ಮರ್ಯಾದೆ ಇದೆಯೇ ಎಂದು ಪ್ರಶ್ನಿಸಿದರು.
ಕರ್ನಾಟಕ ರಾಜ್ಯವನ್ನು ಆರ್ಥಿಕವಾಗಿ ದಿವಾಳಿ ಮಾಡಿರುವುದಕ್ಕೆ ಯಾರು ಜವಾಬ್ದಾರರು. 5 ವರ್ಷಗಳಿಂದ ಒಂದು ಮೆಗಾ ವ್ಯಾಟ್ ವಿದ್ಯುತ್ ಉತ್ಪಾದನೆ ಮಾಡಲಿಲ್ಲ. . ಬರದ ಸಂದರ್ಭದಲ್ಲಿ ವಿದ್ಯುತ್ ತೊಂದರೆಯಾಗಿರುವುದಕ್ಕೆ ಬಿಜೆಪಿ ಕಾರಣ.
16000 ಮೆಗಾ ವ್ಯಾಟ್ ಸೌರ ವಿದ್ಯುತ್ ನಾವು ಉತ್ಪಾದನೆ ಮಾಡಿದ್ದೆವು. ಬಿಜೆಪಿ ಯವರಿಗೆ ಕಾಂಗ್ರೆಸ್ ಬಗ್ಗೆ ಮಾತನಾಡಲು ಯಾವ ನೈತಿಕತೆಯೂ ಇಲ್ಲ. ಏನೂ ಮಾಡಿದ್ದಾರೆ 3 ವರ್ಷ 10 ತಿಂಗಳಲ್ಲಿ ಎಂದು ಪ್ರಶ್ನಿಸಿದರು.

**30,000 ಕೋಟಿ ರೂ.ಗಳಷ್ಟು ಬಾಕಿ ಬಿಲ್ಲುಗಳು:** ಹಣವಿಲ್ಲದಿದ್ದರೂ ಕೆಲಸ ಮಂಜೂರು ಮಾಡಿ, ಟೆಂಡರ್ ಕರೆದು ಬಿಲ್ಲುಗಳನ್ನು ಬಾಕಿ ಇಟ್ಟು ಹೋಗಿದ್ದಾರೆ. 30,000 ಕೋಟಿ ರೂ.ಗಳಷ್ಟು ಬಾಕಿ ಬಿಲ್ಲುಗಳಿವೆ.
ಇದಕ್ಕೆ ಯಾರು ಹೊಣೆ. ನಮ್ಮ ಕಾಲದ ಹಾಗೂ ಬಿಜೆಪಿ ಕಾಲದ ಆರ್ಥಿಕಸ್ಥಿತಿ ಕುರಿತು ಶ್ವೇತಪತ್ರವನ್ನು ವಿಧಾನಮಂಡಲದಲ್ಲಿ ಮಂಡಿಸುತ್ತೇನೆ. ರಾಜ್ಯ ಹಾಳು ಮಾಡಿದ್ದಕ್ಕೆ ಜನ ತಿರಸ್ಕಾರ ಮಾಡಿದ್ದಾರೆ. ಈಗ ರಾಜಕೀಯ ಪ್ರೇರಿತ ಆರೋಪಗಳನ್ನು ಮಾಡುತ್ತಾರೆ ಹೊರತು ಅದರಲ್ಲಿ ಯಾವುದೇ ಸತ್ಯಾಂಶ ಇಲ್ಲ. ಸುಳ್ಳು ಆರೋಪಗಳನ್ನು ಮಾಡುತ್ತಿದ್ದಾರೆ ಎಂದರು.

**ಮಂತ್ರಿಮಂಡಲ ವಿಸ್ತರಣೆ ಬಗ್ಗೆ ಪಕ್ಷದ ವರಿಷ್ಠರು ತೀರ್ಮಾನಿಸುತ್ತಾರೆ:** ಸಂಪುಟ ಪುನರ್ ರಚನೆ ಬಗ್ಗೆ ಮಾತನಾಡಿದ ಮುಖ್ಯಮಂತ್ರಿಗಳು ಸಚಿವರಾಗಬೇಕೆಂದು ಬಯಸುವುದರಲ್ಲಿ ತಪ್ಪಿಲ್ಲ.ಮಂತ್ರಿಮಂಡಲ ವಿಸ್ತರಣೆ ಬಗ್ಗೆ ಪಕ್ಷದ ವರಿಷ್ಠರು ತೀರ್ಮಾನಿಸುತ್ತಾರೆ ಎಂದರು.

**ಖಾಲಿ ಡಬ್ಬಗಳು ಹೆಚ್ಚು ಶಬ್ದ ಮಾಡುತ್ತವೆ:** ಜಾತಿಜನಗಣತಿ ವರದಿ ಬಿಡುಗಡೆ ಮಾಡುವ ಬಗ್ಗೆ ಮುಖ್ಯಮಂತ್ರಿಗಳ ಹೇಳಿಕೆಯ ನಂತರ ಅವರ ಮೇಲಿನ ವಿಪಕ್ಷಗಳ ಆರೋಪಗಳು ಹೆಚ್ಚಾಗಿದೆ ಎಂಬ ಬಗ್ಗೆ ಉತ್ತರಿಸಿ ರಾಜಕೀಯ ವಾಗಿ ಹತಾಶರಾಗಿಮಾತನಾಡುತ್ತಾರೆ. ಖಾಲಿ ಡಬ್ಬಗಳು ಹೆಚ್ಚು ಶಬ್ದ ಮಾಡುತ್ತವೆ ಎಂದರು.

## ಫಾಸ್ಟ್ ನ್ಯೂಸ್

### ಅ.28ರಂದು ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿ

» **ದಾವಣಗೆರೆ**

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮ ಹಾಗೂ ವಿವಿಧ ಇಲಾಖೆಗಳ ಸಂಯುಕ್ತಾಶ್ರಯದಲ್ಲಿ ನಗರದ ಶ್ರೀ ಗುಂಡಿ ಮಹದೇವಪ್ಪ ಕಲ್ಯಾಣ ಮಂಟಪದಲ್ಲಿ ಅಕ್ಟೋಬರ್ 28 ರಂದು ಮಧ್ಯಾಹ್ನ 12 ಗಂಟೆಗೆ ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿ ಸಮಾರಂಭವನ್ನು ಹಮ್ಮಿಕೊಳ್ಳಲಾಗಿದೆ. ಗಣಿ ಮತ್ತು ಭೂ ವಿಜ್ಞಾನ, ತೋಟಗಾರಿಕೆ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್.ಎಸ್ ಮಲ್ಲಿಕಾರ್ಜುನ್ ಕಾರ್ಯಕ್ರಮ ಉದ್ಘಾಟಿಸುವರು. ಶಾಸಕರಾದ ಡಾ. ಶಾಮನೂರು ಶಿವಶಂಕರಪ್ಪ ಅಧ್ಯಕ್ಷತೆ ವಹಿಸುವರು. ಬೆಳಿಗ್ಗೆ 9 ಗಂಟೆಗೆ ನಗರದ ಹೊಂಡದ ವೃತ್ತದಲ್ಲಿರುವ ಶ್ರೀ ರಾಜವೀರ ಮದಕರಿ ನಾಯಕರ ಪ್ರತಿಮೆಗೆ ಮಾಲಾರ್ಪಣೆ ಮಾಡಲಾಗುವುದು. ಮುಖ್ಯ ಅತಿಥಿಗಳಾಗಿ ಸಂಸದರಾದ ಡಾ. ಜಿ.ಎಂ ಸಿದ್ದೇಶ್ವರ, ಮಾಯಕೊಂಡ ಶಾಸಕ ಕೆ.ಎಸ್ ಬಸವಂತಪ್ಪ, ಚನ್ನಗಿರಿ ಶಾಸಕ ಬಸವರಾಜು ವಿ. ಶಿವಗಂಗಾ, ಜಗಳೂರು ಶಾಸಕ ಬಿ. ದೇವೇಂದ್ರಪ್ಪ, ಶಾಸಕ ಬಿ.ಪಿ ಹರೀಶ್, ಹೊನ್ನಾಳಿ ಶಾಸಕ ಶಾಂತನಗೌಡ ಡಿ.ಜಿ, ಮಹಾನಗರ ಪಾಲಿಕೆ ಮೇಯರ್ ವಿನಾಯಕ ಬಿ.ಹೆಚ್, ವಿಧಾನ ಪರಿಷತ್ ಶಾಸಕರಾದ ಕೆ.ಪಿ ನಂಜುಂಡಿ ವಿಶ್ವಕರ್ಮ, ರವಿಕುಮಾರ್.ಎನ್, ಡಾ.ತೇಜಸ್ವಿನಿ ಗೌಡ, ಎಸ್. ಎಲ್ ಭೋಜೇಗೌಡ, ಡಾ ವೈ.ಎ ನಾರಾಯಣಸ್ವಾಮಿ, ಚಿದಾನಂದ ಎಂ. ಗೌಡ, ಡಿ.ಎಸ್ ಅರುಣ್, ಕೆ.ಎಸ್ ನವೀನ್, ಕೆ.ಅಬ್ದುಲ್ ಜಬ್ಬಾರ್, ಜಿಲ್ಲಾಧಿಕಾರಿ ಡಾ. ವೆಂಕಟೇಶ್ ಎಂ.ವಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಉಮಾ ಪ್ರಶಾಂತ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಸುರೇಶ್ ಬಿ ಇಟ್ನಾಳ್, ಮಹಾನಗರ ಪಾಲಿಕೆ ಆಯುಕ್ತೆ ರೇಣುಕಾ, ಪರಿಶಿಷ್ಟ ವರ್ಗಗಳ ಕಲ್ಯಾಣ ಅಧಿಕಾರಿ ಬೇಬಿ ಸುನಿತಾ.ಕೆ ಉಪಸ್ಥಿತರಿರುವರು.

### ಭ್ರಷ್ಟಾಚಾರ ನಿಗ್ರಹ ಜಾಗೃತಿ ಅರಿವು ಸಪ್ತಾಹ

» **ದಾವಣಗೆರೆ**

ಅಕ್ಟೋಬರ್ 30 ರಿಂದ ನವಂಬರ್ 5 ರವರೆಗೆ ಭ್ರಷ್ಟಾಚಾರದ ವಿರುದ್ಧ ಜಾಗೃತಿ ಅರಿವು ಸಪ್ತಾಹವನ್ನು ನಡೆಸಲಾಗುತ್ತಿದ್ದು, ವಿವಿಧ ಸರ್ಕಾರಿ, ಅರೆ ಸರ್ಕಾರಿ ಹಾಗೂ ವಿವಿಧ ಅನುದಾನಿತ ಸಂಸ್ಥೆಗಳಲ್ಲಿ ಅಕ್ಟೋಬರ್ 30 ರಂದು ಬೆಳಿಗ್ಗೆ 11 ಗಂಟೆಗೆ ಭ್ರಷ್ಟಾಚಾರ ನಿಗ್ರಹದ ಪ್ರತಿಜ್ಞಾ ವಿಧಿಯನ್ನು ಸ್ವೀಕರಿಸುವ ಮೂಲಕ ಜಾಗೃತಿ ಅರಿವು ಸಪ್ತಾಹವನ್ನು ಆಚರಿಸಬೇಕು ಎಂದು ಜಿಲ್ಲಾಧಿಕಾರಿ ಡಾ. ವೆಂಕಟೇಶ್ ಎಂ.ವಿ ತಿಳಿಸಿದ್ದಾರೆ.

### ದೀಪಾವಳಿ ಹಬ್ಬದ ಪ್ರಯುಕ್ತ ಪಟಾಕಿ ಮುಂಜಾಗ್ರತಾ ಕ್ರಮ ಕುರಿತು ಸಭೆ

» **ದಾವಣಗೆರೆ**

ಪ್ರಸಕ್ತ ಸಾಲಿನ ದೀಪಾವಳಿ ಹಬ್ಬದ ಸಮಯದಲ್ಲಿ ಸಾರ್ವಜನಿಕವಾಗಿ ಹಸಿರು ಪಟಾಕಿ ಮಾರಾಟ ಮಾಡುವ ಸಂದರ್ಭದಲ್ಲಿ ತೆಗೆದುಕೊಳ್ಳಬಹುದಾದ ಮುಂಜಾಗ್ರತಾ ಕ್ರಮಗಳ ಕುರಿತು ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಅಕ್ಟೋಬರ್ 26 ರಂದು ಬೆಳಿಗ್ಗೆ 11 ಗಂಟೆಗೆ ಜಿಲ್ಲಾಡಳಿತ ಭವನದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸಭೆಯನ್ನು ಹಮ್ಮಿಕೊಳ್ಳಲಾಗಿದೆ.

### ಮೀನುಗಾರಿಕೆ ಸಾಲ, ಸೌಲಭ್ಯಕ್ಕಾಗಿ ಅರ್ಜಿ

» **ದಾವಣಗೆರೆ**

ಮೀನುಗಾರಿಕೆ ಇಲಾಖೆ ವತಿಯಿಂದ 2023–24ನೇ ಸಾಲಿನ ಮೀನುಗಾರಿಕೆ ಇಲಾಖೆ ಫಲಾನುಭವಿ ಆಧಾರಿತ ಯೋಜನೆಗಳಿಗೆ ವೃತ್ತಿಪರ ಮೀನುಗಾರರಿಂದ ಅರ್ಜಿ ಆಹ್ವಾನಿಸಲಾಗಿದೆ.

ಯೋಜನೆಯಲ್ಲಿ ಮೀನುಗಾರಿಕೆ ಸಲಕರಣೆ ಕಿಟ್ಟುಗಳ ವಿತರಣೆ, ರಿವರ್ ಗ್ಲಾಸ್ ಹರಿಗೋಲು ವಿತರಣೆ, ಮತ್ಸ್ಯ ವಾಹಿನಿ ಮತ್ತು ಮೀನು ಮಾರಾಟಕ್ಕೆ ಸಹಾಯ, ಮೀನು ಸಾಗಾಣಿಕೆ ವಾಹನ ಖರೀದಿಗೆ ಸಹಾಯ ಸೌಲಭ್ಯಗಳನ್ನು ನೀಡಲಾಗುವುದು.

ಆಸಕ್ತ ಮತ್ತು ಅರ್ಹ ಮೀನುಗಾರರು ನವಂಬರ್ 11 ರೊಳಗಾಗಿ ಆಯಾ ತಾಲ್ಲೂಕಿನ ಮೀನುಗಾರಿಕೆ ಸಹಾಯಕ ನಿರ್ದೇಶಕರ ಕಚೇರಿಗೆ ಸಂಪರ್ಕಿಸಿ ಅರ್ಜಿ ಸಲ್ಲಿಸಬಹುದಾಗಿದೆ ಎಂದು ಜಿಲ್ಲಾ ಮೀನುಗಾರಿಕೆ ಉಪನಿರ್ದೇಶಕ ಡಿ.ಅಣ್ಣಪ್ಪಸ್ವಾಮಿ ತಿಳಿಸಿದ್ದಾರೆ.

### ಅ. 28, 29ರಂದು ವಿವಿಧ ಹುದ್ದೆಗಳ ಆಯ್ಕೆಗೆ ಸ್ಪರ್ಧಾತ್ಮಕ ಪರೀಕ್ಷೆ

» **ದಾವಣಗೆರೆ**

ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ವತಿಯಿಂದ ಅಕ್ಟೋಬರ್ 28 ಮತ್ತು 29ರಂದು ವಿವಿಧ ನಿಗಮ ಮಂಡಳಿಗಳಲ್ಲಿನ ಹುದ್ದೆಗಳ ಭರ್ತಿಗಾಗಿ ಸ್ಪರ್ಧಾತ್ಮಕ ಪರೀಕ್ಷೆ ನಡೆಸಲಾಗುತ್ತಿದೆ.

ಅಕ್ಟೋಬರ್ 28ರಂದು ಜಿಲ್ಲೆಯಾದ್ಯಂತ 26 ಪರೀಕ್ಷಾ ಕೇಂದ್ರಗಳಲ್ಲಿ 12042 ಅಭ್ಯರ್ಥಿಗಳು ಮತ್ತು ಅಕ್ಟೋಬರ್ 29ರಂದು 37 ಪರೀಕ್ಷಾ ಕೇಂದ್ರಗಳಲ್ಲಿ 16248 ಅಭ್ಯರ್ಥಿಗಳು ಪರೀಕ್ಷೆಗೆ ಹಾಜರಾಗಲಿದ್ದಾರೆ ಎಂದು ಪದವಿ ಪೂರ್ವ ಶಿಕ್ಷಣ ಇಲಾಖೆ ಉಪ ನಿರ್ದೇಶಕರು ತಿಳಿಸಿದ್ದಾರೆ.

#### ಪೂರ್ವಭಾವಿ ಸಭೆಯಲ್ಲಿ ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ

# ಕನ್ನಡ ರಾಜ್ಯೋತ್ಸವ: ವಿಜೃಂಭಣೆಯಿಂದ ಆಚರಣೆ

» **ಚಿತ್ರದುರ್ಗ**



ಮೈಸೂರು ರಾಜ್ಯ ಕರ್ನಾಟಕ ಎಂದು ನಾಮಕರಣವಾಗಿ ನವೆಂಬರ್ 01 ಕ್ಕೆ 50 ವರ್ಷ ಪೂರ್ಣಗೊಳ್ಳಲಿದೆ. ಹೀಗಾಗಿ ಈ ಬಾರಿಯ ಕನ್ನಡ ರಾಜ್ಯೋತ್ಸವವನ್ನು ನವೆಂಬರ್ 01 ರಂದು ಹೆಚ್ಚು ವಿಜೃಂಭಣೆಯಿಂದ ಹಾಗೂ ಅರ್ಥಪೂರ್ಣವಾಗಿ ಆಚರಿಸಲು ನಿರ್ಧರಿಸಲಾಗಿದ್ದು, ಅದರನ್ವಯ ಅಗತ್ಯ ಸಿದ್ಧತೆಗಳನ್ನು ಕೈಗೊಳ್ಳಬೇಕು ಎಂದು ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ ತಿಳಿಸಿದರು.

ಜಿಲ್ಲಾ ಮಟ್ಟದಲ್ಲಿ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮ ಆಚರಿಸುವ ಸಂಬಂಧ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಬುಧವಾರ ಏರ್ಪಡಿಸಿದ ಪೂರ್ವಭಾವಿ ಸಮಾಲೋಚನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಕರ್ನಾಟಕ ನಾಮಕರಣಕ್ಕೆ 50 ವರ್ಷಗಳ ಸಂಭ್ರಮಾಚರಣೆ ಹಿನ್ನಲೆಯಲ್ಲಿ ಈ ಬಾರಿಯ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮವನ್ನು ನವೆಂಬರ್ 01 ರಂದು ಜಿಲ್ಲಾ ಕೇಂದ್ರದಲ್ಲಿ ಹೆಚ್ಚು ವಿಜೃಂಭಣೆ ಹಾಗೂ ಅರ್ಥಪೂರ್ಣವಾಗಿ ಆಚರಿಸಲಾಗುವುದು. ರಾಜ್ಯೋತ್ಸವದ ಅಂಗವಾಗಿ ಅಂದು ಬೆಳಿಗ್ಗೆ 7.30ಕ್ಕೆ ತಾಯಿ ಭುವನೇಶ್ವರಿ ದೇವಿಯ ಭಾವಚಿತ್ರದ ಮೆರವಣಿಗೆಯು ನಗರದ ನೀಲಕಂಠೇಶ್ವರ ದೇಗುಲದಿಂದ ಪ್ರಾರಂಭವಾಗಲಿದೆ. ಮೆರವಣಿಗೆಯಲ್ಲಿ ನಮ್ಮ ನಾಡು, ನುಡಿ, ಸಂಸ್ಕೃತಿ ಬಿಂಬಿಸುವ ವಿವಿಧ ವೈವಿಧ್ಯಮಯ ಜಾನಪದ ಕಲಾತಂಡಗಳು ಪಾಲ್ಗೊಳ್ಳಲಿವೆ. ಇದಕ್ಕ ಬೇಕಾದ ತಂಡಗಳನ್ನು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವ್ಯವಸ್ಥೆಗೊಳಿಸಬೇಕು. ಇದರ ಜೊತೆಗೆ ಸರ್ಕಾರದ ಯೋಜನೆಗಳನ್ನು ಜನರಿಗೆ ತಲುಪಿಸುವ ವಿವಿಧ ಇಲಾಖೆಗಳ ಸ್ತಬ್ಧಚಿತ್ರಗಳು ಪಾಲ್ಗೊಳ್ಳಲಿವೆ. ಕೃಷಿ, ತೋಟಗಾರಿಕೆ, ರೇಷ್ಮೆ ಇಲಾಖೆ, ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆ, ಆರೋಗ್ಯ ಇಲಾಖೆ, ಜಿ ಪಂ, ಭದ್ರಾ ಮೇಲ್ದಂಡೆ ಯೋಜನೆ, ಸರ್ಕಾರದ ಗ್ಯಾರಂಟಿ ಯೋಜನೆಗಳ ಸ್ತಬ್ಧಚಿತ್ರಗಳು, ಶಿಕ್ಷಣ ಇಲಾಖೆ, ಸಮಾಜ ಕಲ್ಯಾಣ, ಹಿಂದುಳಿದ ವರ್ಗಗಳ ಕಲ್ಯಾಣ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ಸೇರಿದಂತೆ ವಿವಿಧ ಇಲಾಖೆಗಳ ಸರ್ಕಾರದ ಯೋಜನೆಗಳನ್ನು ಸ್ತಬ್ಧಚಿತ್ರಗಳ ಮೂಲಕ ಸಾರ್ವಜನಿಕರಿಗೆ ತಲುಪಿಸುವ ಕೆಲಸ ಮಾಡಬೇಕು ಎಂದು ಅಧಿಕಾರಿಗಳಿಗೆ ಸೂಚನೆ ನೀಡಿದರು

ಮೆರವಣಿಗೆಯು ನಗರದ ನೀಲಕಂಠೇಶ್ವರದ ದೇಗುಲದಿಂದ ಹೊರಟು, ಪ್ರಮುಖ ರಸ್ತೆ ಮೂಲಕ ರಾಜ್ಯೋತ್ಸವ ಸಮಾರಂಭ ಜರುಗುವ ಪೊಲೀಸ್ ಕವಾಯತು ಮೈದಾನದವರೆಗೆ ಸಾಗಿ ಬರಲಿದೆ. ಅಂದು ಬೆಳಿಗ್ಗೆ 9ಕ್ಕೆ ಪೊಲೀಸ್ ಕವಾಯತು ಮೈದಾನದಲ್ಲಿ ರಾಜ್ಯೋತ್ಸವ ಸಮಾರಂಭದ ಅಂಗವಾಗಿ ಜಿಲ್ಲಾ ಉಸ್ತುವಾರಿ ಸಚಿವರಿಂದ ರಾಷ್ಟ್ರಧ್ವಜಾರೋಹಣ ನೆರವೇರಲಿದ್ದು, ಶಿಷ್ಟಾಚಾರದಅನ್ವಯಎಲ್ಲಗಣ್ಯಮಾನ್ಯರನ್ನು ಆಹ್ವಾನಿಸಲಾಗುವುದು. ಶಾಲಾ ಕಾಲೇಜು ವಿದ್ಯಾರ್ಥಿಗಳಿಂದ ಅಂದು ಬೆಳಿಗ್ಗೆ ಪೊಲೀಸ್ ಕವಾಯತು ಮೈದಾನದಲ್ಲಿ ಹಾಗೂ ಸಂಜೆ ತರಾಸು ರಂಗಮಂದಿರದಲ್ಲಿ ವೈವಿಧ್ಯಮಯ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಲಿವೆ ಎಂದರು. ಕರ್ನಾಟಕಕ್ಕೆ 50 ರ ಸಂಭ್ರಮಾಚರಣೆ ಹಿನ್ನೆಲೆಯಲ್ಲಿ ಈ ಬಾರಿ ವಿಶೇಷವಾಗಿ ಈ ನಾಡಿನ ಹೆಸರಾಂತ 05 ಕವಿಗಳು ರಚಿಸಿರುವ ಗೀತೆಗಳನ್ನು ರಾಜ್ಯೋತ್ಸವ ಸಮಾರಂಭದಲ್ಲಿ ಕಡ್ಡಾಯವಾಗಿ ಹಾಡುವ ಮೂಲಕ ನುಡಿ ನಮನ ಸಲ್ಲಿಸಲು ರಾಜ್ಯ ಸರ್ಕಾರ ನಿರ್ದೇಶನ ನೀಡಿದೆ. ಇದರನ್ವಯ ಹುಯಿಲಗೋಳ ನಾರಾಯಣರಾಯರು ರಚಿಸಿರುವ "ಉದಯವಾಗಲಿ ನಮ್ಮ ಚೆಲುವ ಕನ್ನಡ ನಾಡು", ಕುವೆಂಪು ರಚಿತ "ಎಲ್ಲಾದರು ಇರು ಎಂತಾದರು ಇರು", ದ.ರಾ.ಬೇಂದ್ರ ರಚಿಸಿರುವ "ಒಂದೇ ಒಂದೇ ಕರ್ನಾಟಕ ಒಂದೇ", ಸಿದ್ದಯ್ಯ ಪುರಾಣಿಕರು ರಚಿಸಿರುವ "ಹೊತ್ತಿತೋ ಹೊತ್ತಿತು ಕನ್ನಡದ ದೀಪ", ಹಾಗೂ ಚನ್ನವೀರ ಕಣವಿ ಅವರು ಬರೆದಿರುವ "ಹೆಸರಾಯಿತು ಕರ್ನಾಟಕ ಉಸಿರಾಗಲಿ ಕನ್ನಡ" ಎಂಬ 05 ಗೀತೆಗಳನ್ನು ಕನ್ನಡ ರಾಜ್ಯೋತ್ಸವ ಸಮಾರಂಭದಲ್ಲಿ ಕಡ್ಡಾಯವಾಗಿ ಹಾಡಿಸಬೇಕು, ಇದಕ್ಕಾಗಿ ಉತ್ತಮ ಗೀತ ಗಾಯನ ತಂಡವನ್ನು ಆಯ್ಕೆಮಾಡಿ, ಹಾಡುಗಳನ್ನು ಪ್ರಸ್ತುತಪಡಿಸಲು ಕ್ರಮ ಕೈಗೊಳ್ಳಬೇಕು ಎಂದು ಜಿಲ್ಲಾಧಿಕಾರಿಗಳು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಇದೇ ರೀತಿ, ಜಿಲ್ಲೆಯ ಎಲ್ಲೆಡೆಯೂ ಕನ್ನಡ ರಾಜ್ಯೋತ್ಸವ ಆಚರಣೆ ಸಂದರ್ಭದಲ್ಲಿ 05 ಗೀತೆಗಳನ್ನು ಕಡ್ಡಾಯವಾಗಿ ಹಾಡಿಸಲು ಕ್ರಮ ಕೈಗೊಳ್ಳಬೇಕು ಎಂದು ಜಿಲ್ಲಾಧಿಕಾರಿಗಳು ಇದೇ ಸಂದರ್ಭದಲ್ಲಿ ತಿಳಿಸಿದರು.

ಕನ್ನಡ ರಾಜ್ಯೋತ್ಸವವನ್ನು ವ್ಯವಸ್ಥಿತವಾಗಿ ಆಚರಿಸಲು ಅನುವಾಗುವಂತೆ ರಚಿಸಲಾಗಿರುವ ಸ್ವಾಗತ ಸಮಿತಿ, ಹಣಕಾಸು ಸಮಿತಿ, ಮೆರವಣಿಗೆ ಸಮಿತಿ ಹಾಗೂ ಜಿಲ್ಲಾಮಟ್ಟದ ಪ್ರಶಸ್ತಿಗೆ ಆಯ್ಕೆ ಸಮಿತಿ ಸೇರಿದಂತೆ ವಿವಿಧ ಸಮಿತಿಗಳು ತಮಗೆ ವಹಿಸಿರುವ ಜವಾಬ್ದಾರಿಯನ್ನುಅಚ್ಚುಕಟ್ಟಾಗಿನಿರ್ವಹಿಸಿ, ರಾಜ್ಯೋತ್ಸವವನ್ನು ಯಶಸ್ವಿಗೊಳಿಸಬೇಕು ಎಂದು ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು.

ಸಭೆಯಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಧರ್ಮೇಂದ್ರ ಕುಮಾರ್ ಮೀನಾ, ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ, ಉಪವಿಭಾಗಾಧಿಕಾರಿ ಎಂ.ಕಾರ್ತಿಕ್, ನಗರಸಭೆ ಪೌರಾಯುಕ್ತೆ ರೇಣುಕಾ, ಕೈಗಾರಿಕೆ ಇಲಾಖೆ ಜಂಟಿ ನಿರ್ದೇಶಕ ಬಿ.ಆನಂದ್, ಆಹಾರ ಇಲಾಖೆ ಜಂಟಿ ನಿರ್ದೇಶಕ ಮಧುಸೂಧನ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಮಲ್ಲಿಕಾರ್ಜುನ್, ಕನ್ನಡ ಸಾಹಿತ್ಯ ಪರಿಷತ್ ಜಿಲ್ಲಾ ಘಟಕದ ಅಧ್ಯಕ್ಷ ಕೆ.ಎಂ. ಶಿವಸ್ವಾಮಿ ಸೇರಿದಂತೆ ವಿವಿಧ ಸಂಘ ಸಂಸ್ಥೆಗಳ ಪದಾಧಿಕಾರಿಗಳು, ಕನ್ನಡಪರ ಸಂಘಟನೆಗಳು, ವಿವಿಧ ಇಲಾಖೆಯ ಜಿಲ್ಲಾ ಮಟ್ಟದ ಅಧಿಕಾರಿಗಳು, ಗಣ್ಯರು ಮತ್ತಿತರರು ಇದ್ದರು.

#### ಗರ್ಭಿಣಿಯರ ಮನೆ ಮನೆ ಭೇಟಿ, ಕುಟುಂಬ ಸಮಾಲೋಚನೆ

# ಸಿಸೇರಿಯನ್‌ಗಿಂತ ನಾರ್ಮಲ್ ಡೆಲಿವರಿ ತುಂಬಾ ಒಳ್ಳೆಯದು: ಟಿಹೆಚ್‌ಓ ಡಾ.ಬಿ.ವಿ.ಗಿರೀಶ್ ಹೇಳಿಕೆ

» **ಚಿತ್ರದುರ್ಗ**



ಪ್ರಸಕ್ತ ದಿನಗಳಲ್ಲಿ ನಾರ್ಮಲ್ ಡೆಲಿವರಿ ತುಂಬಾ ಅಪರೂಪವಾಗುತ್ತಿದೆ. ಮಹಿಳೆಯರ ಮುಂದಿನ ಆರೋಗ್ಯದ ದೃಷ್ಟಿಯಿಂದ ಸಿಸೇರಿಯನ್‌ಗಿಂತ ನಾರ್ಮಲ್ ಡೆಲಿವರಿ ತುಂಬಾ ಒಳ್ಳೆಯದು ಎಂದು ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಬಿ.ವಿ.ಗಿರೀಶ್ ಹೇಳಿದರು.

ಚಿತ್ರದುರ್ಗ ತಾಲ್ಲೂಕಿನ ಗೊಡಬನಹಾಳ್ ಪ್ರಾಥಮಿಕ ಆರೋಗ್ಯ ಕೇಂದ್ರ ವ್ಯಾಪ್ತಿಯ ಜಂಪಯ್ಯನಹಟ್ಟಿ ಗ್ರಾಮದಲ್ಲಿ ತಾಲ್ಲೂಕು ಆರೋಗ್ಯಾಧಿಕಾರಿಗಳ ತಂಡದೊಂದಿಗೆ ತೊಂದರೆಯಲ್ಲಿರುವ ಗರ್ಭಿಣಿಯರ ಮನೆ ಮನೆ ಭೇಟಿ ನಡೆಸಿ ಅವರು ಮಾತನಾಡಿದರು.

ನವ ಮಾಸಗಳ ಕಾಲ ಜೀವವೊಂದನ್ನು ತನ್ನೊಡಲಲ್ಲಿ ಬೆಳೆಸಿ, ಜನ್ಮ ನೀಡುವುದೆಂದರೆ ಮಹಿಳೆ ತಾನೇ ಮರುಜನ್ಮ ಪಡೆದಂತೆ. ಹೆರಿಗೆ ನೋವೆಂದರೆ ಅದೊಂದು ಅತೀವ ವೇದನೆ. ಈ ನೋವಿನ ಬಳಿಕ ಮಗುವಿನ ಮುಖ ನೋಡಿದಾಗ ಸಿಗುವ ಸಂತೋಷವೇ ಬೇರೆ. ಗರ್ಭಿಣಿ ಸ್ತ್ರೀಯರು ಎದುರಿಸಬೇಕಾಗಿ ಬರುವ ಸವಾಲುಗಳೂ ಸಾಕಷ್ಟಿರುತ್ತವೆ. ಹೆಚ್ಚಿನ ಹೆರಿಗೆಗಳು ಯಾವುದೇ ತೊಡಕಿಲ್ಲದೇ ನಿರಾತಂಕವಾಗಿ ನಡೆದುಹೋಗುವಂತಹವುಗಳಾಗಿದ್ದು, ಅವುಗಳು ಬಾವೋದ್ವೇಗದ ಕ್ಷಣಗಳಾಗಿರುತ್ತವೆ. ಮೂರನೇ ತ್ರೈಮಾಸಿಕದಲ್ಲಿ ಮಗುವಿನ ಬೆಳವಣಿಗೆ ಕೂಡ ಒಂದು ಹಂತಕ್ಕೆ ಮುಗಿದಿರುತ್ತದೆ. ಅಲ್ಲದೆ ಹೆರಿಗೆಯ ದಿನಗಳು ಹತ್ತಿರ ಬಂದಿರುತ್ತದೆ. ಹೀಗಾಗಿ ಆರೈಕೆ ವಿಚಾರದಲ್ಲಿ ಹೆಚ್ಚು ಗಮನವಹಿಸಬೇಕಾಗುತ್ತದೆ ಎಂದು ಗರ್ಭಿಣಿಯರಿಗೆ ಸಲಹೆ ನೀಡಿದರು.

ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ಎನ್.ಎಸ್. ಮಂಜುನಾಥ್ ಮಾತನಾಡಿ, ಗರ್ಭಾವಸ್ಥೆಯಲ್ಲಿ ಪ್ರತೀ ಹಂತವೂ ಅತೀ ಮುಖ್ಯವಾಗಿರುತ್ತದೆ. ಮೂರು ತ್ರೈಮಾಸಿಕದಲ್ಲಿ ದೇಹಕ್ಕೆ, ಮಗುವಿನ ಬೆಳವಣಿಗೆಗೆ ಆಗತ್ಯವಾಗಿರುವ ಆಹಾರಗಳನ್ನು ಸೇವನೆ ಮಾಡುವುದು ಅಗತ್ಯವಾಗಿರುತ್ತದೆ. ಅದರಲ್ಲೂ ಮೂರನೇ ತ್ರೈ ಮಾಸಿಕದಲ್ಲಿ ಮಗುವಿನ ಬೆಳವಣಿಗೆ ಕೂಡ ಒಂದು ಹಂತಕ್ಕೆ ಮುಗಿದಿರುತ್ತದೆ. ಅಲ್ಲದೆ ಹೆರಿಗೆಯ ದಿನಗಳು ಹತ್ತಿರ ಬಂದಿರುತ್ತದೆ. ಹೀಗಾಗಿ ಅಂತಹ ಸಂದರ್ಭದಲ್ಲಿ ದೇಹದ ಭಾರ ಹೆಚ್ಚುವುದು, ಕಾಲುಗಳಲ್ಲಿ ಊತ ಸೇರಿದಂತೆ ಅನೇಕ ಇತರ ಸಮಸ್ಯೆಗಳು ಕಾಣಿಸಿಕೊಳ್ಳಬಹುದು. ಮೂರನೇ ತ್ರೈಮಾಸಿಕದ ಮೊದಲು ತಿಂಗಳಾದ 7ನೇ ತಿಂಗಳಿನಲ್ಲಿ ಮೊಸರನ್ನು ಸೇವನೆ ಮಾಡಬಹುದು. ಇನ್ನು ಅನ್ನ, ಅನ್ನದ ಪಾಯಸ ಇವುಗಳನ್ನು ತಿನ್ನಬಹುದಾಗಿದೆ. ಬೆಲ್ಲ ಹಾಕಿ ಮಾಡಿದ ಪಾಯಸದ ಸೇವನೆಯಿಂದ ದೇಹದಲ್ಲಿ ಕ್ಯಾಲ್ಸಿಯಂ ಮಟ್ಟವೂ ಉತ್ತಮವಾಗುತ್ತದೆ. ಇದರ ಜೊತೆಗೆ ಏಳನೇ ತಿಂಗಳಿನಲ್ಲಿ ದೇಹದ ಮಸಾಜ್ ಮಾಡಿಕೊಳ್ಳಬಹುದು. ಇದರಿಂದ ಭಾರವೆನಿಸುವ ದೇಹಕ್ಕೆ ಸ್ವಲ್ಪ ರಿಲಾಕ್ಸ್ ಸಿಗುತ್ತದೆ ಎಂದರು.

ಬಲವರ್ಧನೆ ಮತ್ತು ಪೋಷಣೆಯನ್ನು ನೀಡಲು ತುಪ್ಪವನ್ನು ಬೆರೆಸಿದ ಹಾಲಿನೊಂದಿಗೆ ತಯಾರಿಸಿದ ಅಕ್ಕಿ ಗಂಜಿಯನ್ನು 8ನೇ ತಿಂಗಳಿನಲ್ಲಿ ತಿನ್ನಬಹುದು. ಇದರ ಜೊತೆಗೆ ನಾನ್ ವೆಜ್ ತಿನ್ನುವವರಾದರೆ ಸೂಪ್ ಮಾಡಿ ಸೇವಿಸಬಹುದು ಎಂದು ಸಲಹೆ ನೀಡಿದರು.

ಹಿರಿಯ ಆರೋಗ್ಯ ಸುರಕ್ಷತಾ ಅಧಿಕಾರಿ ಕಾತ್ಯಾಯನಮ್ಮ ಮಾತನಾಡಿ, ಮಕ್ಕಳ ಆರೈಕೆ ನಿಯಮಿತವಾಗಿ ಲಸಿಕೆ ಕೊಡಿಸುವುದು, ಗರ್ಭಿಣಿ ಬಾಣಂತಿ ಭೇಟಿಯ ಸಮಯದಲ್ಲಿ ಆಶಾ ಕಾರ್ಯಕರ್ತೆಯರಿಗೆ ಮತ್ತು ಪ್ರಾಥಮಿಕ ಆರೋಗ್ಯ ಸುರಕ್ಷತಾ ಅಧಿಕಾರಿಗಳಿಗೆ ಸರಿಯಾದ ಮಾಹಿತಿ ಒದಗಿಸಬೇಕು ಎಂದರು. ಕ್ಷೇತ್ರ ಶಿಕ್ಷಣಾಧಿಕಾರಿ ಬಿ.ಮೂಗಪ್ಪ ಅವರು ಕುಟುಂಬ ಯೋಜನೆ, ಅಂತರದ ಹೆರಿಗೆ, ಪುರುಷರ ಸಹಭಾಗಿತ್ವ, ಸುಖಿ ಕುಟುಂಬದ ಮಾರ್ಗಸೂಚಿಗಳ ಕುರಿತು ಮಾಹಿತಿ ನೀಡಿದರು.

### ಎನ್.ಮಾರುತಿ ಸ್ಮರಣಾರ್ಥ ಹೊನಲು, ಬೆಳಕಿನ ಕ್ರಿಕೆಟ್ ಪಂದ್ಯಾವಳಿ: ಆರ್‌ಡಿಎಕ್ಸ್‌ಗೆ ಮೊದಲ ಬಹುಮಾನ



» **ಚಳ್ಳಕೆರೆ**

ನಗರದ ಬಿಎಂ ಸರ್ಕಾರಿ ಪ್ರೌಢಶಾಲಾ ಮೈದಾನದಲ್ಲಿ ಯುವ ಕ್ರಿಕೆಟಿಗ ದಿವಂಗತ ಎನ್.ಮಾರುತಿ ಸ್ಮರಣಾರ್ಥ ಹೊನಲು, ಬೆಳಕಿನ ಕ್ರಿಕೆಟ್ ಪಂದ್ಯಾವಳಿಯನ್ನು ಎರಡು ದಿನಗಳ ಕಾಲ ನಡೆಸಿದ್ದು, ಸುಮಾರು 30 ತಂಡಗಳು ಪಂದ್ಯಾವಳಿಯಲ್ಲಿ ಭಾಗವಹಿಸಿದ್ದವು ಎಂದು ತಿಪ್ಪೇಸ್ವಾಮಿ ತಿಳಿಸಿದರು. ಅವರು, ಪತ್ರಿಕೆಗೆ ಮಾಹಿತಿ ನೀಡಿ ಸದರಿ ಪಂದ್ಯಾವಳಿಯಲ್ಲಿ ಕೇವಲ ನಗರದ ಕ್ರಿಕೆಟ್ ತಂಡಗಳು ಮಾತ್ರ ಭಾಗವಹಿಸಲು ಅವಕಾಶ ಕಲ್ಪಿಸಿದ್ದು, ಪ್ರಥಮಸ್ಥಾನ ಪಡೆದ ತಂಡಕ್ಕೆ 10 ಸಾವಿರ, ಪಾರಿತೋಷಕ, ದ್ವಿತೀಯ ಸ್ಥಾನ ಪಡೆದ ತಂಡಕ್ಕೆ 5 ಸಾವಿರ, ಪಾರಿತೋಷಕ, ತೃತೀಯ ಸ್ಥಾನ ಪಡೆದ ತಂಡಕ್ಕೆ ಆಕರ್ಷಕ ಪಾರಿತೋಷಕ ಬಹುಮಾನವನ್ನು ನೀಡಲಾಯಿತು. ಪ್ರಥಮ ಸ್ಥಾನವನ್ನು ನಗರದ ಆರ್‌ಡಿಎಕ್ಸ್ ತಂಡ, ಎರಡನೇ ಸ್ಥಾನವನ್ನು 001 ತಂಡ ಪಡೆದುಕೊಂಡರೆ ಸಮಧಾನಕರ ಬಹುಮಾನವನ್ನು ಸರ್ಕಾರಿ ಇಂಜಿನಿಯರಿಂಗ್ ಕಾಲೇಜಿನ ವಿದ್ಯಾರ್ಥಿಗಳು ಪಡೆದುಕೊಂಡರು. ಎರಡು ದಿನಗಳ ಕಾಲ ನಡೆದ ಪಂದ್ಯಾವಳಿಯಲ್ಲಿ ಯಾವುದೇ ಅಹಿತಕರ ಘಟನೆ ನಡೆಯದಂತೆ ಎಚ್ಚರಿಕೆ ವಹಿಸಲಾಯಿತು. ನಗರದ ವಿವಿಧ ಕ್ರಿಕೆಟ್ ತಂಡಗಳ ಆಟಗಾರರು ಹೊನಲು-ಬೆಳಕಿನ ಪಂದ್ಯಾವನ್ನು ವೀಕ್ಷಿಸಿದರು.

### ಜನಸಂಪರ್ಕ ಸಭೆ

**ಶಿವಮೊಗ್ಗ:** ಮೆಸ್ಕಾಂ ಶಿವಮೊಗ್ಗ ನಗರ ಉಪವಿಭಾಗ-3 ಕಛೇರಿಯಲ್ಲಿ ದಿನಾಂಕ 31.10.2023 ರ ಬೆಳಿಗ್ಗೆ 11.00 ಗಂಟೆಯಿಂದ ಮಧ್ಯಾಹ್ನ 01 ಗಂಟೆಯವರೆಗೆ ಜನ ಸಂಪರ್ಕ ಸಭೆ ನಡೆಯಲಿದ್ದು, ಸಂಬಂಧಪಟ್ಟ ಪ್ರದೇಶದ ಗ್ರಾಹಕರ ಅಹವಾಲುಗಳನ್ನು ಸ್ವೀಕರಿಸಲಾಗುದು. ಹೆಚ್ಚಿನ ಮಾಹಿತಿಗೆ ಮೊ. ಸಂಖ್ಯೆ:9480841339 ನ್ನು ಸಂಪರ್ಕಿಸಬಹುದು.

## ಪ್ರಮುಖ ಸುದ್ದಿ

#### ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರ ಅಪಘಾತ ಪರಿಹಾರ ಯೋಜನೆ

# ನಿರ್ವಾಹಕರು ಮತ್ತು ಕ್ಲೀನರ್‌ಗಳ ನೋಂದಣಿಗಾಗಿ ಮನವಿ

» **ಚಿತ್ರದುರ್ಗ**

ಕರ್ನಾಟಕ ರಾಜ್ಯ ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರಾದ ಚಾಲಕರು, ನಿರ್ವಾಹಕರು ಮತ್ತು ಕ್ಲೀನರ್‌ಗಳಿಗಾಗಿ ಅಪಘಾತ ಪರಿಹಾರ ಸೌಲಭ್ಯ ಒದಗಿಸುವ ಉದ್ದೇಶದಿಂದ "ಕರ್ನಾಟಕ ರಾಜ್ಯ ಖಾಸಗೀ ವಾಣಿಜ್ಯ ಸಾರಿಗೆ ವಾಹನ ಕಾರ್ಮಿಕರ ಅಪಘಾತ ಪರಿಹಾರ ಯೋಜನೆ" ಜಾರಿಗೆ ತಂದಿರುತ್ತದೆ. ಈ ಯೋಜನೆಯಡಿ ಕರ್ನಾಟಕ ಸಾರಿಗೆ ಇಲಾಖೆಯಿಂದ ಊರ್ಜಿತ ಚಾಲನಾ ಪರವಾನಗಿ ಪಡೆದ ಖಾಸಗಿ ವಾಣಿಜ್ಯ ಚಾಲಕರನ್ನು ಫಲಾನುಭವಿಗಳಾಗಿ ಪರಿಗಣಿಸಲಾಗಿದ್ದು, ನಿರ್ವಾಹಕರು ಮತ್ತು ಕ್ಲೀನರ್‌ಗಳು ಯೋಜನೆಯಡಿ ನೋಂದಾಯಿಸಿಕೊಳ್ಳಬಹುದು.

ಕಾರ್ಮಿಕ ಇಲಾಖೆಯ ಈ ಯೋಜನೆ ಜಾರಿಗೆ ತಂದಿದ್ದು, ಕರ್ನಾಟಕ ರಾಜ್ಯ ಖಾಸಗೀ ವಾಣಿಜ್ಯ ಸಾರಿಗೆ ವಾಹ ನ ಕಾರ್ಮಿಕರ ಅಪಘಾತ ಪರಿಹಾರ ಯೋಜನೆಯಡಿ, ಖಾಸಗೀ ವಾಣಿಜ್ಯ ಸಾರಿಗೆ ಕಾರ್ಮಿಕರಾದ ಚಾಲಕರು, ನಿರ್ವಾಹಕರು ಮತ್ತು ಕ್ಲೀನರ್‌ಗಳು ನಿರಂತರವಾಗಿ ಅಪಘಾತಗಳಿಗೆ ತುತ್ತಾಗಿ ಸಂಕಷ್ಟಕ್ಕೆ ಸಿಲುಕುವ ಸಾದ್ಯತೆಗಳು ಹೆಚ್ಚಾಗಿದ್ದು ಇವರು ಅಪಘಾತಕ್ಕೀಡಾದಾಗ ಮರಣಕ್ಕೆ ತುತ್ತಾಗುವ ಶಾಶ್ವತ ದುರ್ಬಲತೆ ಅಥವಾ ತಾತ್ಕಾಲಿಕ ದುರ್ಬಲತೆ ಹೊಂದಿದ ಸಂದರ್ಭದಲ್ಲಿ ಅವರ ದುಡಿಮೆಯನ್ನೇ ಅವಲಂಭಿಸಿರುವ ಅವರ ಕುಟುಂಬವು ಆರ್ಥಿಕವಾಗಿ ಹಾಗೂ ಸಾಮಾಜಿಕವಾಗಿ ಸಂಕಷ್ಟಕ್ಕೆ ಸಿಲುಕುತ್ತದೆ. ಇಂತಹ ಕಾರ್ಮಿಕರು ಹಾಗೂ ಅವರ ಕುಟುಂಬದ ಸದಸ್ಯರಿಗೆ ಅಪಘಾತ ಪರಿಹಾರ ಸೌಲಭ್ಯ ಒದಗಿಸುವ ಮೂಲಕ ಸಾಮಾಜಿಕ ಹಾಗೂ ಆರ್ಥಿಕ ಭದ್ರತೆ ಒದಗಿಸುವ ಸದುದ್ದೇಶದಿಂದ ಖಾಸಗೀ ವಾಣಿಜ್ಯ ಸಾರಿಗೆ ಕಾರ್ಮಿಕರಾದ ಚಾಲಕರು, ನಿರ್ವಾಹಕರು ಮತ್ತು ಕ್ಲೀನರ್‌ಗಳು ಈ ಯೋಜನೆಯಡಿ ಕಾರ್ಮಿಕ ಅಧಿಕಾರಿಯವರ ಕಛೇರಿ, ಚಿತ್ರದುರ್ಗ ಜಿಲ್ಲೆ, ಚಿತ್ರದುರ್ಗ ಇಲ್ಲಿ ನೋಂದಾಯಿಸಿಕೊಳ್ಳಬಹುದಾಗಿದೆ.

ಷರತ್ತುಗಳು: ಈ ಯೋಜನೆಯು ಕರ್ನಾಟಕ ರಾಜ್ಯಕ್ಕೆ ಮಾತ್ರ ಅನ್ವಯಿಸುತ್ತದೆ. ಯೋಜನೆಯ ಖಾಸಗೀ ವಾಣಿಜ್ಯ ಸಾರಿಗೆ ಕಾರ್ಮಿಕರಾದ ಚಾಲಕರು ನಿರ್ವಾಹಕರು ಹಾಗೂ ಕ್ಲೀನರ್‌ಗಳಿಗೆ ಅನ್ವಯಿಸುತ್ತದೆ.. ವಯೋಮಿತಿ 20 ರಿಂದ 70 ವರ್ಷಗಳು.ಜ ಯೋಜನೆಯ ಸೌಲಭ್ಯಗಳು ಕರ್ತವ್ಯದಲ್ಲಿರುವಾಗ ಹಾಗೂ ಇಲ್ಲದಿರುವಾಗಲು ಸಹ ಲಭ್ಯವಾಗುತ್ತದೆ. ಚಾಲಕರು ಕರ್ನಾಟಕ ರಾಜ್ಯ ಸಾರಿಗೆ ಇಲಾಖೆಯಿಂದ ವಾಣಿಜ್ಯ ವಾಹನ ಚಾಲಾಯಿಸಲು ಊರ್ಜಿತ ಚಾಲನಾ ಪರವಾನಿಗೆ ಹೊಂದಿರುವುದು ಕಡ್ಡಾಯ, ಚಾಲಕರು ಮಂಡಳಿಯಲ್ಲಿ ಯೋಜನೆಯಡಿ ಪ್ರತ್ಯೇಕವಾಗಿ ನೋಂದಣಿ ಮಾಡಿಸುವ ಅವಶ್ಯಕತೆ ಇರುವುದಿಲ್ಲ. ನಿರ್ವಾಹಕರು ಹಾಗೂ ಕ್ಲೀನರ್‌ಗಳು ಮಂಡಳಿಯ ನಿಯಮಾನುಸಾರ ಕಾರ್ಮಿಕ ಇಲಾಖೆಯಲ್ಲಿ ಯೋಜನೆಯಡಿ ಫಲಾನುಭವಿಯಾಗಿ ನೋಂದಣಿ ಮಾಡಿಸಿಕೊಳ್ಳಬೇಕು.

ಸೌಲಭ್ಯಗಳು: ಅಪಘಾತದಿಂದ ಚಾಲಕರು ನಿರ್ವಾಹಕರು ಮತ್ತು ಕ್ಲೀನರ್ (Conductor & Cleaner) ಗಳು ಮರಣ ಹೊಂದಿದ್ದಲ್ಲಿ ಅವರ ನಾಮನಿರ್ದೇಶಿತರಿಗೆ ರೂ. 5. ಲಕ್ಷ ಪರಿಹಾರ ಅಪಘಾತದಿಂದ ಶಾಶ್ವತ ದುರ್ಬಲತೆ ಹೊಂದಿದಾಗ ಫಲಾನುಭವಿಗೆ ದುರ್ಬಲತೆಯ ಪ್ರಮಾಣಕ್ಕನುಗುಣವಾಗಿ ಗರಿಷ್ಠ ರೂ. 2. ಲಕ್ಷದವರೆಗೆ ಪರಿಹಾರ ಅಪಘಾತದಿಂದ ತಾತ್ಕಾಲಿಕ ದುರ್ಬಲತೆ ಹೊಂದಿದಾಗ ಅಪಘಾತಕ್ಕೊಳಗಾಗಿ ಆಸ್ಪತ್ರೆಯಲ್ಲಿ 15 ದಿನಗಳಿಗಿಂತ ಕಡಿಮೆ ಅವಧಿಗೆ ಒಳರೋಗಿಯಾಗಿ ಚಿಕಿತ್ಸೆ ಪಡೆದಲ್ಲಿ ಗರಿಷ್ಠ ರೂ. 50, ಸಾವಿರಗಳ ವರೆಗೆ ಅಥವಾ ನಿಖರ ಆಸ್ಪತ್ರೆ ವೆಚ್ಚ ಇವುಗಳಲ್ಲಿ ಯಾವುದು ಕಡಿಮೆಯೋ ಅದನ್ನ ಪಾವತಿಸಲಾಗುವುದು. 15 ದಿನಗಳಿಗಿಂತ ಹೆಚ್ಚು ದಿನ ಒಳರೋಗಿಯಾಗಿ ಚಿಕಿತ್ಸೆ ಪಡೆದಿದ್ದಲ್ಲಿ ಗರಿಷ್ಠ ರೂ. 1. ಲಕ್ಷದವರೆಗೆ ಅಥವಾ ನಿಖರ ಆಸ್ಪತ್ರೆ ವೆಚ್ಚ ಇವುಗಳಲ್ಲಿ ಯಾವುದು ಕಡಿಮೆಯೋ ಅದನ್ನು ಪಾವತಿಸಲಾಗುವುದು.

ಕ್ಲೈಮ್ ಅರ್ಜಿ ಸಲ್ಲಿಸುವ ವಿಧಾನ: ಪರಿಹಾರ ಮೊತ್ತವನ್ನು ಪಡೆಯಲು ಅಪಘಾತ ಸಂಭವಿಸಿದ ಒಂದು ವರ್ಷದೊಳಗೆ ಮಂಡಳಿಗೆ ಫಲಾನುಭವಿ/ನಾಮ ನಿರ್ದೇಶಿತರು ಅರ್ಜಿಯನ್ನು ಸಲ್ಲಿಸಬೇಕು. ಸ್ವೀಕರಿಸಿದ ಕ್ಲೈಮ್ ಅರ್ಜಿಯ ದಾಖಲೆಗಳನ್ನು ಪರಿಶೀಲಿಸಿ ಅರ್ಹರಿದ್ದಲ್ಲಿ ಪರಿಹಾರದ ಮೊತ್ತವನ್ನು ಅರ್ಜಿದಾರರ ಬ್ಯಾಂಕ್ ಖಾತೆಗೆ ನೇರವಾಗಿ ಜಮೆ ಮಾಡಲಾಗುವುದು. ನಿರ್ವಾಹಕರು ಮತ್ತು ಕ್ಲೀನರ್ (Conductor & Cleaner) ಗಳು ಕಾರ್ಮಿಕ ಇಲಾಖೆಯಲ್ಲಿ ನೋಂದಣಿ ಮಾಡಿಸಿಕೊಂಡು ಅಪಘಾತ ಪರಿಹಾರ ಪಡೆದುಕೊಳ್ಳಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಕಛೇರಿ ದೂರವಾಣಿ ಸಂಖ್ಯೆ: 08194-231394 ಗೆ ಸಂಪರ್ಕಿಸಬಹುದಾಗಿದೆ ಎಂದು ಕಾರ್ಮಿಕ ಅಧಿಕಾರಿ ತಿಳಿಸಿದ್ದಾರೆ.

## ಫಾಸ್ಟ್ ನ್ಯೂಸ್

### "ಸಹಕಾರ" ವಿಷಯ ಕುರಿತು ಪ್ರಬಂಧ ಸ್ಪರ್ಧೆ- ಸೂಕ್ತ ಬಹುಮಾನ

» **ಚಿತ್ರದುರ್ಗ**

70ನೇ ಅಖಿಲ ಭಾರತ ಸಹಕಾರ ಸಪ್ತಾಹ ಅಂಗವಾಗಿ 2023ರ ನವೆಂಬರ್ 14 ರಿಂದ 20 ರವರೆಗೆ ಭಾರತ ದೇಶಾದ್ಯಂತ ಅರ್ಥಪೂರ್ಣವಾಗಿ ಸಪ್ತಾಹದಾಚರಣೆಯನ್ನು ಆಚರಿಸಲಾಗುವುದು. ಇದರ ಅಂಗವಾಗಿ ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ವತಿಯಿಂದ ಸಪ್ತಾಹದ ಧ್ಯೇಯ ಹಾಗೂ ಚಿಂತನ ಮಂಥನ ವಿಷಯಗಳ ಕುರಿತು ಪ್ರಬಂಧ ಸ್ಪರ್ಧೆ ಏರ್ಪಡಿಸಿದೆ.ಸ್ಪರ್ಧೆಯ ನಿಬಂಧನೆಗಳು: 8 ವಿಷಯಗಳಲ್ಲಿ ಯಾವುದಾದರೂ ಒಂದು ವಿಷಯವನ್ನು ಆಯಕೆ ಮಾಡಿಕೊಂಡು ಪುಲ್‌ಸ್ಕೇಪ್ ಆಧಾರದ 4 ಪುಟಗಳಿಗೆ ಮೀರದಂತೆ ಪ್ರಬಂಧವನ್ನು ಬರೆಯುವುದು, ಪ್ರಬಂಧ ಸ್ಪರ್ಧೆಯಲ್ಲಿ ಲೇಖನಗಳು ಸ್ವಂತ ಚಿಂತನೆಯಿಂದ ಮೂಡಿರಬೇಕು ಕೃತಿಚೌರ್ಯ ಆಗಬಾರದು. ಕನ್ನಡ ಅಥವಾ ಇಂಗ್ಲೀಷ್‌ನಲ್ಲಿ ಬರೆಯಬಹುದು. ಪ್ರಬಂಧ ಸ್ಪರ್ಧೆಯಲ್ಲಿ ಪ್ರತಿಯೊಬ್ಬ ಸಾರ್ವಜನಿಕರು ಭಾಗವಹಿಸಬಹುದು, ಪ್ರಬಂಧವನ್ನು 2023ರ ನವೆಂಬರ್ 5ರ ಒಳಗಾಗಿ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ, ನಂ.32, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು-560001 ಈ ವಿಳಾಸಕ್ಕೆ ಕಳುಹಿಸಬೇಕು. ತಜ್ಞರಿಂದ ಆಯ್ಕೆಯಾದ ಪ್ರಬಂಧಕ್ಕೆ ಸೂಕ್ತ ಸಂಭಾವನೆಯನ್ನು ನೀಡಲಾಗುವುದು ಹಾಗೂ ಸಹಕಾರ ವಾರ ಪತ್ರಿಕೆಯಲ್ಲಿ ಪ್ರಕಟಿಸಲಾಗುವುದು. 70ನೇ ಅಖಿಲ ಭಾರತ ಸಹಕಾರ ಸಪ್ತಾಹದ 7 ದಿನಗಳ ಆಚರಣೆಯ ಚಿಂತನ ಮಂಥನ ವಿಷಯಗಳು ಇಂತಿವೆ. ನವೆಂಬರ್ 14ರಂದು ಸಹಕಾರ ಸಂಘ ಸಂಸ್ಥೆಗಳಲ್ಲಿನ ಇತ್ತೀಚಿನ ಬೆಳವಣಿಗೆಗಳು, ನ.15ರಂದು ಸಾಲೇತರ ಸಂಘಗಳ ಪುನಶ್ಚೇತನ ಹಾಗೂ ಆರ್ಥಿಕ ಸೇರ್ಪಡೆ, ನ.16ರಂದು ಸಹಕಾರ ಸಂಸ್ಥೆಗಳನ್ನು ಡಿಜಿಟಲೀಕರಣಗೊಳಿಸಲು ತಾಂತ್ರಿಕತೆಯ ಅಳವಡಿಕೆ ಮತ್ತು ಉನ್ನತೀಕರಣ, ನ.17ರಂದು ಸಹಕಾರ ಸಂಸ್ಥೆಗಳಲ್ಲಿ ಸರಳ ವ್ಯಾಪಾರ ಪ್ರಕಿಯೆ ಮತ್ತು ಉದಯೋನ್ಮುಖ ವಲಯಗಳು, ನ.18ರಂದು ಸಾರ್ವಜನಿಕ-ಖಾಸಗಿ-ಸಹಕಾರಿ ಸಹಭಾಗಿತ್ವವನ್ನು ಬಲಪಡಿಸುವುದು, ನ.19ರಂದು ಮಹಿಳೆಯರು, ಯುವಜನ ಮತ್ತು ಅಬಲ ವರ್ಗಕ್ಕೆ ಸಹಕಾರ ಸಂಸ್ಥೆಗಳು, ನ.20ರಂದು ಸಹಕಾರ ಶಿಕ್ಷಣ, ತರಬೇತಿಯ ಪರಿಷ್ಕರಣೆ ವಿಷಯಗಳ ಚಿಂತನ ಮಂಥನ ನಡೆಯಲಿದೆ ಎಂದು ಜಿಲ್ಲಾ ಸಹಕಾರ ಯೂನಿಯನ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ನಾಗರಾಜ ಪಾಟೀಲ್ ತಿಳಿಸಿದ್ದಾರೆ.

### ವ್ಯಕ್ತಿ ಕಾಣೆ

» **ಚಿತ್ರದುರ್ಗ**

ಚಿತ್ರದುರ್ಗ ತಾಲ್ಲೂಕಿನ ಯಳವರ್ತಿ ಗ್ರಾಮದ ನಿವಾಸಿ ಓಬಯ್ಯ ಎಂಬ ವ್ಯಕ್ತಿಯು ಕಾಣೆಯಾಗಿರುವ ಪ್ರಕರಣ 2023ರ ಜನವರಿ 16 ರಂದು ತುರುವನೂರು ಪೊಲೀಸ್ ಠಾಣೆಯಲ್ಲಿ ದಾಖಲಾಗಿದೆ.ಕಾಣೆಯಾದ ವ್ಯಕ್ತಿಯ ಚಹರೆ ಇಂತಿದೆ: ಓಬಯ್ಯ (52ವರ್ಷ) ತಂದೆ ಓಬಯ್ಯ, ಕೋಲುಮುಖ, ಗೋದಿ ಮೈಬಣ್ಣ, ಸದೃಢ ದೇಹಕಾಯ, ಬಿಳಿ ಮಿಶ್ರಿತ ಕಪ್ಪು ಬಣ್ಣದ ತಲೆ ಕೂದಲು ಇರುತ್ತದೆ. ಕನ್ನಡ, ತೆಲುಗು ಭಾಷೆ ಮಾತನಾಡುತ್ತಾರೆ. ಕಾಣೆಯಾದ ಸಮಯದಲ್ಲಿ ಬಿಳಿ ಪಂಚೆ, ಬಿಳಿ ಶರ್ಟ್ ಧರಿಸಿರುತ್ತಾರೆ.ಈ ಮೇಲ್ಕಂಡ ಚಹರೆಯುಳ್ಳ ವ್ಯಕ್ತಿಯ ಕುರಿತು ಮಾಹಿತಿ ತಿಳಿದು ಬಂದಲ್ಲಿ ತುರುವನೂರು ಪೊಲೀಸ್ ಠಾಣೆಗೆ ಸಂಪರ್ಕಿಸಬೇಕು ಎಂದು ತುರುವನೂರು ಪೊಲೀಸ್ ಠಾಣೆಯ ಪೊಲೀಸ್ ನಿರೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಹೊಸದುರ್ಗ: ಅ.30ರಂದು ತಾಲ್ಲೂಕುಮಟ್ಟದ "ಜನತಾ ದರ್ಶನ"



» **ಚಿತ್ರದುರ್ಗ**

ಜಿಲ್ಲಾಧಿಕಾರಿ ದಿವ್ಯಪ್ರಭು ನೇತೃತ್ವದಲ್ಲಿ ಇದೇ ಅಕ್ಟೋಬರ್ 30ರಂದು ಬೆಳಿಗ್ಗೆ 10ಕ್ಕೆ ಹೊಸದುರ್ಗ ನಗರದ ಶ್ರೀ ಸಿದ್ದರಾಮೇಶ್ವರ ಸಮುದಾಯ ಭವನದಲ್ಲಿ ತಾಲ್ಲೂಕು ಮಟ್ಟದ "ಜನತಾ ದರ್ಶನ" ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಜಿಲ್ಲಾ ಉಸ್ತುವಾರಿ ಸಚಿವರ ನೇತೃತ್ವದಲ್ಲಿ ಪ್ರತಿ ತಿಂಗಳು ಜಿಲ್ಲಾ ಮಟ್ಟದ ಜನತಾ ದರ್ಶನ ಕಾರ್ಯಕ್ರಮ ಹಾಗೂ ಜಿಲ್ಲಾಧಿಕಾರಿಗಳ ನೇತೃತ್ವದಲ್ಲಿ ಪ್ರತಿ 15 ದಿನಗಳಿಗೊಮ್ಮೆ ತಾಲ್ಲೂಕು ಮಟ್ಟದ ಜನತಾ ದರ್ಶನ ಕಾರ್ಯಕ್ರಮ ಹಮ್ಮಿಕೊಂಡು, ಜನರ ಅಹವಾಲು ಆಲಿಸಿ ಸಮಸ್ಯೆಗಳಿಗೆ ಪರಿಹಾರೋಪಾಯಗಳನ್ನು ಒದಗಿಸುವ ನಿಟ್ಟಿನಲ್ಲಿ ಸೂಕ್ತ ಕ್ರಮವಹಿಸಲಾಗುತ್ತದೆ. ಸಾರ್ವಜನಿಕರು ತಾಲ್ಲೂಕು ಮಟ್ಟದ ಜನತಾ ದರ್ಶನದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ, ತಮ್ಮ ಅಹವಾಲುಗಳನ್ನು ಸಲ್ಲಿಸಬಹುದು ಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ. ಕುಮಾರಸ್ವಾಮಿ ತಿಳಿಸಿದ್ದಾರೆ.

### ಗೋಪನಹಳ್ಳಿ : ನವರಾತ್ರಿ ಹಬ್ಬದ ಹಿನ್ನೆಲೆಯಲ್ಲಿ ಗ್ರಾಮ ದೇವರುಗಳ ಮೆರವಣಿಗೆ

# ಮೈಲಾರಲಿಂಗೇಶ್ವರ ಸನ್ನಿಧಿಯಲ್ಲಿ ದೋಣಿ ಸೇವೆ

» **ಚಳ್ಳಕೆರೆ**

ನವರಾತ್ರಿ ಹಬ್ಬದ ಹಿನ್ನೆಲೆಯಲ್ಲಿ ಪ್ರತಿವರ್ಷದಂತೆ ಈ ವರ್ಷವೂ ಗೋಪನಹಳ್ಳಿ ಗ್ರಾಮದ ಮೈಲಾರಲಿಂಗೇಶ್ವರ, ದ್ಯಾಮಲಾಂಭ, ನರಸಿಂಹಸ್ವಾಮಿ, ರಂಗನಾಥಸ್ವಾಮಿ ಮತ್ತು ಯಲ್ಲಮ್ಮ ದೇವರುಗಳ ಭವ್ಯವಾದ ಮೆರವಣಿಗೆ ಗ್ರಾಮದ ಪ್ರಮುಖ ರಸ್ತೆಗಳಲ್ಲಿ ನಡೆದು ಅಗ್ನಿಕುಂಡ ಮತ್ತು ದೋಣಿ ಸೇವೆ ಕಾರ್ಯಕ್ರಮವೂ ಸಹ ಯಶಸ್ವಿಯಾಗಿ ನಡೆದವು.

ಗ್ರಾಮದಲ್ಲೇಲ್ಲಾ ನವರಾತ್ರಿ ಹಬ್ಬದ ಉತ್ಸಾಹ ಎದ್ದುಕಾಣುತ್ತಿತ್ತು. ಪ್ರಾರಂಭದಲ್ಲಿ ದ್ಯಾಮಲಾಂಭ ದೇವಸ್ಥಾನ ಆವರಣದಲ್ಲಿ ಅಗ್ನಿಕುಂಡ ಕಾರ್ಯಕ್ರಮ ನಡೆದರೆ, ಮೈಲಾರಲಿಂಗೇಶ್ವರ ದೇವಸ್ಥಾನದ ಆವರಣದಲ್ಲಿ ದೋಣಿ ಸೇವೆ(ಗೊರವಕುಣಿತ) ಕಾರ್ಯಕ್ರಮ ನೂರಾರು ಭಕ್ತರ ಸಮ್ಮುಖದಲ್ಲಿ ಭಕ್ತಿ ಶ್ರದ್ದೆಯಿಂದ ನಡೆಸಲಾಯಿತು. ವಿಶೇಷವಾಗಿ ದೋಣಿ ಸೇವೆ ಕಾರ್ಯಕ್ರಮಕ್ಕೆ ಚಿತ್ರದುರ್ಗ, ಮಾಳಪ್ಪನಹಟ್ಟಿ, ಹಿರೇಮಧುರೆ, ಗಂಜಿಗುಂಟೆ, ಕೂಡ್ಲಹಳ್ಳಿ, ಬುಡರಕುಂಟೆ, ಗೊರ್ಲತ್ತು, ಗೋಪನಹಳ್ಳಿ ಬೇಡರಹಳ್ಳಿ, ಮಠದಹಟ್ಟಿ ಮುಂತಾದ ಗ್ರಾಮಗಳಿಂದ ಭಕ್ತರು ಆಗಮಿಸಿ ದೋಣಿ ಸೇವೆ ಕಾರ್ಯಕ್ರಮದಲ್ಲಿ ಪಾಲ್ಗೊಂಡರು. ಮೈಲಾರಲಿಂಗೇಶ್ವರ ಚಾಂಗಮಲೋ ಎಂಬಘೋಷಣೆಯೊಂದಿಗೆ ಆಗಮಿಸಿದ ಗೊರವಯ್ಯರು ದೋಣಿ ಸೇವೆ ಕಾರ್ಯಕ್ರಮದಲ್ಲಿ ಪಾಲ್ಗೊಂಡರಲ್ಲದೆ, ತಾಮ್ರದ ಪಾತ್ರೆಗಳಲ್ಲಿ ಭಕ್ತರು ತುಂಬಿದ್ದ ಬಾಳೆಹಣ್ಣು, ಹಾಲು, ಸಕ್ಕರೆ, ತುಪ್ಪ ಮುಂತಾದವುಗಳನ್ನು ಡಮರುಗ





ಹೊಡೆಯುತ್ತಲೇ ಕುಣಿಯುತ್ತಾ ಸೇವೆ ನೀಡಿದರು. ಈ ಸಂದರ್ಭದಲ್ಲಿ ಗೊರವರ ಮೇಲೆ ದೇವರು ಬರುತ್ತಾನೆಂಬ ಪ್ರತೀತಿ ಇದ್ದು, ಗೊರವರ ಕುಣಿತ ಹೆಚ್ಚುತ್ತಲೇ ಪೂಜಾರರು ಗೊರವರ ದೇವರ ತೀರ್ಥವನ್ನು ಹಾಕುವ ಮೂಲಕ ಸಮದಾನ ಪಡಿಸಿದರು. ಸುಮಾರು ಗಂಟೆಗಳ ಕಾಲ ಈ ಕಾರ್ಯಕ್ರಮ ಯಶಸ್ವಿಯಾಗಿ ನಡೆಯಿತು.

ಗುಡಿಗೌಡರಾದ ಎಚ್.ನಿಂಗಪ್ಪ, ಮೈಲಾರಪ್ಪ, ಸತೀಶ್, ಜಿ.ಪ್ರಸನ್ನಕುಮಾರ್, ಗ್ರಾಮ ಪಂಚಾಯಿತಿ ಅಧ್ಯಕ್ಷ ರಾಧಮ್ಮ, ಸದಸ್ಯರಾದ ನಾಗರಾಜು, ಉಮೇಶ್, ಗ್ರಾಮಮುಖಂಡ ಓಂಕಾರಪ್ಪ, ಶಿವಣ್ಣ ಮುಂತಾದವರು ಭಾಗವಹಿಸಿದ್ದರು.

### ದೊಡ್ಡೇರಿ ಮೈಲಾರಲಿಂಗೇಶ್ವರ ದೇವಸ್ಥಾನದಲ್ಲಿ ದೋಣಿ ಸೇವೆ

» **ಚಳ್ಳಕೆರೆ**

ತಾಲ್ಲೂಕಿನ ದೊಡ್ಡೇರಿ ಗ್ರಾಮದ ಮೈಲಾರಲಿಂಗೇಶ್ವರ ದೇವಸ್ಥಾನದಲ್ಲಿ ನವರಾತ್ರಿ ಉತ್ಸವದ ಹಿನ್ನೆಲೆಯಲ್ಲಿ ಮಡಿವಾಳ ಸಮುದಾಯದ ಮುಖಂಡರುದೋಣಿಸೇವೆಕಾರ್ಯಕ್ರಮವನ್ನುಹಮ್ಮಿಕೊಂಡಿದ್ದರು. ಬೆಳಗಿನಿಂದಲೇ ಮೈಲಾರಲಿಂಗೇಶ್ವರಸ್ವಾಮಿಗೆ ಪೂಜೆ ಸಲ್ಲಿಸಿದ ನಂತರ ದೇವಸ್ಥಾನದ ಆವರಣದಲ್ಲೇ ವಿವಿಧೆಡೆಗಳಿಂದ ಆಗಮಿಸಿದ ಗೊರವಯ್ಯಗಳು ದೋಣಿ ಸೇವೆ ಕಾರ್ಯಕ್ರಮದಲ್ಲಿ ಪಾಲ್ಗೊಂಡರು. ಈ ಸಂದರ್ಭದಲ್ಲಿ ದೇವಸ್ಥಾನದಲ್ಲಿದ್ದ ನೂರಾರು ಭಕ್ತರು ದೋಣಿ ಸೇವೆ ಕಾರ್ಯಕ್ರಮವನ್ನು ಕಣ್ತುಂಬಿಕೊಂಡರು. ತಾಲ್ಲೂಕು ಮಡಿವಾಳ ಸಮುದಾಯದ ಗೌರವಾಧ್ಯಕ್ಷ ನಾಗರಾಜು, ಉಪಾಧ್ಯಕ್ಷ ಪುಟ್ಟಲಿಂಗಪ್ಪ, ಕೆಂಚವೀರನಹಳ್ಳಿ ಮಲ್ಲೇಶ್, ನಿರಂಜನಮೂರ್ತಿ ಮುಂತಾದವರು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.



# ಹೊಸದುರ್ಗ: ವೈಭವವಾಗಿ ಜರುಗಿದ ಶ್ರೀ ದುರ್ಗಾ ಪರಮೇಶ್ವರಿ ಅಮ್ಮನವರ ರಾಜ ಬೀದಿ ಉತ್ಸವ

» **ಹೊಸದುರ್ಗ**

ಪಟ್ಟಣದ ಶ್ರೀ ದುರ್ಗಾ ಸೇವಾ ಸಮಿತಿಯ ವತಿಯಿಂದ ಪಟ್ಟಣದ ಶ್ರೀ ವಿನಾಯಕ ರಂಗಮಂದಿರದ ಶ್ರೀ ದುರ್ಗಾದೇವಿ ಮಂಟಪದಲ್ಲಿ ಆರನೇ ವರ್ಷದ ಶ್ರೀ ದುರ್ಗಾ ಪರಮೇಶ್ವರಿ ಅಮ್ಮನವರ ಶರನ್ನವರಾತ್ರಿ ದಸರಾ ಮಹೋತ್ಸವಕ್ಕೆ ಮಂಗಳವಾರ ದೇವಿರ ರಾಜಬೀದಿ ಉತ್ಸವ ಮತ್ತು ವಿಸರ್ಜನೆಯೊಂದಿಗೆ ನಾಂದಿ ಹಾಡಲಾಯಿತು.

ಆ.15 ರಿಂದ ಆ.24 ರವರೆಗೆ ಒಟ್ಟು 9 ದಿನಗಳ ಕಾಲ ನಡೆಯಲಿರುವ ದುರ್ಗಾ ಉತ್ಸವದ ಮೊದಲನೆಯ ದಿನವಾದ ದಿನಾಂಕ 15 ರಂದು ಭಾನುವಾರ ಬೆಳಿಗ್ಗೆ 10.30 ಕ್ಕೆ ಶ್ರೀ ದುರ್ಗಾಪರಮೇಶ್ವರಿ ಅಮ್ಮನವರ ಪ್ರತಿಷ್ಠಾಪನೆ ನಡೆಯಿತು.ಪ್ರತಿನಿತ್ಯ ಬೆಳಿಗ್ಗೆ ಶ್ರೀ ದುರ್ಗಾ ಪರಮೇಶ್ವರಿ ಅಮ್ಮನವರಿಗೆ ಅಭಿಷೇಕ ಪೂಜಾದಿಗಳು,ಹಾಗೂ ಸ್ಥಳಿಯ ಭಜನಾ ಮಂಡಳಿಯವರಿಂದ ಭಜನೆ ಕಾರ್ಯಕ್ರಮ,ಮಧ್ಯಾಹ್ನ 1 ಗಂಟೆಗೆ ಮಹಾಮಂಗಳಾರತಿ ನಂತರ ಪ್ರಸಾದ ವಿನಿಯೋಗ,ಪ್ರತಿ ದಿನ ಸಂಜೆ 7 ಗಂಟೆಯಿಂದ ಹೆಸರಾಂತ ಕಲಾವಿದರಿಂದ ವಿವಿಧಸಾಂಸ್ಕೃತಿ ಕಾರ್ಯಕ್ರಮಗಳಾದ ಜಾನಪದ ನೃತ್ಯ ಮೇಳ,ನೃತ್ಯೋತ್ಸವ,ಸುಗಮ ಸಂಗೀತ,ಮಧುಮಗ-ತ್ರಿ ನಗೆ ಕಿರು



ನಾಟಕ ಇನ್ನೂ ಇತರೆ ಸಂಸ್ಕೃತಿಕ ಕಾರ್ಯಕ್ರ ಮಗಳು ಜರುಗಿದವು

ಆ.22 ರಂದು ಭಾನುವಾರ ದುರ್ಗಾಷ್ಠಮಿಯಂದು ಶ್ರೀಮ ನವ ಚಂಡಿಕಾ ಹೋಮ,ಕುಮಾರಿ ಪೂಜೆ,ಪೂರ್ಣಾಹುತಿ,ಮಹಾಮಂಗ 'ಳಾರತಿ,ಹಾಗೂ ಅನ್ನಸಂತರ್ಪಣೆ ಕಾರ್ಯಕ್ರಮಗಳು ನಡೆದವು ಆ.24 ರಂದು ಮಂಗಳವಾರ ವಿಜಯ ದಶಮಿಯಂದು ಶ್ರೀ ದುರ್ಗಾಪರಮೇಶ್ವರಿ ಅಮ್ಮನವರ ರಾಜಬೀದಿ ಉತ್ಸವ ವನ್ನ ಬೆಳಿಗ್ಗೆ ಪ್ರಾರಂಭಿಸಿ ನಂತರ ಸಂಜೆ ಮಠದ ಹೊಂಡದಲ್ಲಿ ವಿಸರ್ಜನೆ ಮಾಡಲಾಯಿತು.

ದೇವಿಯ ರಾಜಬೀದಿ ಉತ್ಸವದ ದಿವಸ ಊರಿನ ಎಲ್ಲಾ ದೇವರುಗಳ ಉತ್ಸವದ್ದು ಇಲ್ಲಿನ ಎಲ್ಲಾ ಬೀದಿಗಳ ಅಂಗಡಿ,ಮನೆ ಅವರಣವನ್ನು ತಳಿರು ತೋರಣಗಳಿಂದ ಶೃಂಗರಿಸಿ ಉತ್ಸವದಲ್ಲಿ ಭಾಗವಹಿಸಿ ವಿಜಯದರ್ಶಮಿ ಹಬ್ಬಕ್ಕೆ ಮೆರಗು ನೀಡಲಾಗಿತ್ತು. ಸಮಿತಿಯ ಗೌರವಾಧ್ಯಕ್ಷ ಭರತ್‌ಪಾಟೀಲ್, ಅಧ್ಯಕ್ಷ ಟಿ.ಮಂಜುನಾಥ್, ಪಾಂಡುರಂಗರಾಯ್ಕರ್ ಉಪಾಧ್ಯಕ್ಷ ಡಿ.ಹೆಚ್.ನಾಗರಾಜ್,ಕಾಯದರ್ಶಿ ಎಸ್.ಕೆ.ಮಂಜುನಾಥ್, ಸಹಕಾರ್ಯದರ್ಶಿ ಜಿತೇಂದ್ರ, ಸದಸ್ಯರುಗಳಾದ ಅನಿಲ್,ಪ್ರದೀಪ್, ಪ್ರವೀಣ್, ಜಯರಾಜ್, ಪ್ರಸನ್ನ ಕುಮಾರ್,ರಾಜಣ್ಣ ಭಾಗಿಯಾಗಿದ್ದರು.

### ಡಾ:ರಾಜ್,ಪುನಿತ್‌ರಾಜಕುಮಾರ್ ಸಂಘದಿಂದ ಇಂದು ಸಭೆ

» **ಹೊಸದುರ್ಗ**

ಪಟ್ಟಣದ ಡಾ:ರಾಜ್, ಪುನಿತ್‌ರಾಜಕುಮಾರ್ ಸಂಘದಿಂದ ಅ. 26 ರಂದು ಗುರುವಾರ ಸಂಜೆ 4 ಗಂಟೆಗೆ ಪಟ್ಟಣದ ಸಿದ್ದರಾಮ ನಗರದ ಹೊಸ ಪ್ರವಾಸಿ ಮಂದಿರದಲ್ಲಿ ಸಂಘದ ಅಧ್ಯಕ್ಷರಾದ ಎಂ.ಎಸ್.ನಾಗರಾಜ್ ಅಧ್ಯಕ್ಷತೆಯಲ್ಲಿ ಸರ್ವಸದಸ್ಯರ ಹಾಗೂ ನಿರ್ದೇಶಕರುಗಳ ಸಭೆ ಕರೆಯಲಾಗಿದೆ ಎಂದು ಸಂಘದ ಪ್ರಧಾನ ಕಾರ್ಯದರ್ಶಿ ತಂಗಾಳಿ ತಮ್ಮಣ್ಣ ತಿಳಿಸಿದ್ದಾರೆ. ಈ ಒಂದು ಮಹತ್ವದ ಸಭೆಯಲ್ಲಿ ಈ ವರ್ಷದ ಕನ್ನಡ ರಾಜ್ಯೋತ್ಸವ ಆಚರಿಸುವ ಬಗ್ಗೆ, ಸಂಘದ ಹೊಸ ಸದಸ್ಯರ ಸೇರ್ಪಡೆ ಮಾಡುವ ಬಗ್ಗೆ, ಸಂಘದ ಸಂಪನ್ಮೂಲ ಸಂಗ್ರಹಿಸುವ ಬಗ್ಗೆ ಹಾಗೂ ಸಂಘದ ನಿಯಮಗಳು ಮತ್ತು ಜವಾಬ್ದಾರಿಗಳ ಬಗ್ಗೆ ಚರ್ಚಿಸಲಾಗುವುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಕನ್ನಡ ರಾಜ್ಯೋತ್ಸವ: ಪದಕ ಪಡೆದ ಕ್ರೀಡಾಪಟುಗಳಿಗೆ ಸನ್ಮಾನ

» **ಚಿತ್ರದುರ್ಗ**



ನವೆಂಬರ್ 1ರಂದು ನಡೆಯುವ ಕನ್ನಡ ರಾಜ್ಯೋತ್ಸವ ದಿನಾಚರಣೆ ಸಂಬಂಧ 2022-23ನೇ ಸಾಲಿನಲ್ಲಿ ಅಂತರಾಷ್ಟ್ರೀಯ ಮಟ್ಟದ ಅಂಗೀಕೃತ ಕ್ರೀಡೆಗಳಲ್ಲಿ ಭಾಗವಹಿಸಿ ಪದಕ ಪಡೆದ ಕ್ರೀಡಾಪಟುಗಳನ್ನು ಆಯ್ಕೆ ಮಾಡಿ ಸನ್ಮಾನಿಸಲಾಗುವುದು. ವಿಶೇಷ ಚೇತನ ಕ್ರೀಡಾಪಟುಗಳಿಗೆ-1 ಪ್ರಶಸ್ತಿ, ಸಾಮಾನ್ಯ ಕ್ರೀಡಾಪಟುಗಳಿಗೆ-1 ಪ್ರಶಸ್ತಿ ನೀಡಿ ಗೌರವಿಸಲಾಗುವುದು. ಆದ್ದರಿಂದ ಕ್ರೀಡಾಪಟುಗಳು ಸ್ವವಿವರ ಮತ್ತು ದಾಖಲೆಗಳನ್ನು ಇದೇ ಅಕ್ಟೋಬರ್ 26ರಂದು ಸಂಜೆ 4 ಗಂಟೆಯೊಳಗಾಗಿ ಸಹಾಯಕ ನಿರ್ದೇಶಕ ಕಛೇರಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಚಿತ್ರದುರ್ಗ ಕಛೇರಿಗೆ ಸಲ್ಲಿಸುವಂತೆ ಪ್ರಕಟಣೆ ತಿಳಿಸಿದೆ.

## ಪ್ರಮುಖ ಸುದ್ದಿ

# ಹೊಸದುರ್ಗದಲ್ಲಿ ವೈಭವಯುತ ದಸರಾ ಅಂಬಿನೋತ್ಸವ

» **ಹೊಸದುರ್ಗ**

ಪಟ್ಟಣದ ಹುಳಿಯಾರು ರಸ್ತೆಯಲ್ಲಿರುವ ಬನ್ನಿಮರದ ಮಂಟಪದ ವಿಶಾಲವಾದ ಆವರಣದಲ್ಲಿ ಮಂಗಳವಾರ ಸಂಜೆ ಅತ್ಯಂತ ವೈಭವಯುತವಾದ ಅಂಬಿನೋತ್ಸವ ನಡೆಯಿತು.

ಸಂಜೆ 6.15 ರ ಸುಮಾರಿನಲ್ಲಿ ಪಟ್ಟಣದ ಪ್ರಮುಖ ದೇವತಗಳಾದ ಶ್ರೀದುರ್ಗಾಂಬಿಕಾ ದೇವಿ.ಶ್ರೀ ಬನಶಂಕರಿದೇವಿ.ಶ್ರೀ ಪ್ಲೇಗದಮ್ಮ,ಶ್ರೀ ಅಂತರಗಟ್ಟೆಮ್ಮ,ಕಾಳಮ್ಮ ಸೇರಿದಂತೆ ಒಟ್ಟು 9 ದೇವರುಗಳು ಪಟ್ಟಣದ ಪ್ರಟ್ಟಣದ ಪ್ರಮುಖ ರಾಜಬೀದಿಗಳಲ್ಲಿ ಮೆರವಣೀಗೆ ಹೋರಟು ಬನ್ನಿ ಮಂಟಪವನ್ನ ಸೇರಿದವು.

ಬನ್ನಿ ಮಂಟಪದ ಅವರಣದಲ್ಲಿ ಅಪಾರ ಸಂಖ್ಯೆಯಲ್ಲಿ ನೆರೆದಿದ್ದ ಭಕ್ತರು ದೇವರುಗಳಿಗೆಹಾಗೂಬನ್ನಿಮಂಟಪದಲ್ಲಿನ ಅವರಣದಲ್ಲಿದ್ದ ದೇವರುಗಳಿಗೆರ ಪೂಜೆ ಸಲ್ಲಿಸಿ ನಂತರ ನೆರೆದಿದ್ದ ಭಕ್ತ ಸಮೂಹಕ್ಕೆ ಸ್ನೇಹಿತ ಬಳಗಕ್ಕೆ ಮತ್ತು ಆತ್ಮೀಯರಿಗೆ





ಪರಸ್ಪರ ಬನ್ನಿಪತ್ರೆಯನ್ನ ಆತ್ಮೀಯತೆಯಿಂದ ವಿನಿಮಯ ಮಾಡಿಕೊಂಡರು.

ಬನ್ನಿ ಪೂಜೆ ಮುಗಿದ ಕ್ಷಣಾರ್ಧದಲ್ಲೆ ನೆರೆದಿದ್ದ ಜನರು ಬನ್ನಿ ಪತ್ರೆ ಹಾಗೂ ಬಾಳೆ ಪತ್ರೆಯನ್ನ ತೆಗೆದುಕೊಳ್ಳಲು ಮುಗಿ ಬಿದ್ದರು. ಗ್ರಾಮದ 9 ದೇವರುಗಳ ಪೂಜಾರಿಗಳು ಮುಖಂಡರು ಜನಪ್ರತಿನಿಧಿಗಳು ಗೌಡರು ಪ್ರಮುಖರು ಪೂಜೆಯಲ್ಲಿ ಪಾಲ್ಗೊಂಡು ಬನ್ನಿ ಕಾರ್ಯಕ್ರಮವನ್ನ ಯಶಸ್ವಿಗೊಳಿಸಿದರು.

ಇದೇ ಸಂಧರ್ಬದಲ್ಲಿ ತಹಶಿಲ್ದಾರ್ ತಿರುಪತಿಪಾಟೀಲ್ ಅವರು ಬನ್ನಿ ಮಂಟಪದ ಅವರಣದ ಸುತ್ತ ಬಿಲ್ಲಿನ ಬಾಣ ಬಿಡುವ ಮೂಲಕ ಅಂಬಿನೋತ್ಸವ ಸಡಗರ ಸಂಬ್ರಮದಿಂದ ಜರುಗಿತು. ಶಾಸಕ ಬಿ.ಜಿ.ಗೋವಿಂದಪ್ಪ ಪುರಸಭಾ ಮುಖ್ಯಾಧಿಕಾರಿ ತಿಮ್ಮರಾಜು ಜಿ.ವಿ ಸೇರಿದಂತೆ ಪುರಸಭಾ ಸಿಬ್ಬಂಧಿ ವರ್ಗ ಹಾಗೂ ಪಟ್ಟಣದ ಪ್ರಮುಖ ಜನಪ್ರತಿನಿಧಿಗಳು ಮುಖಂಡರುಗಳು ಪೂಜಾ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.ಮಹಾಲಯ ಅಮವಾಸ್ಯೆಯಿಂದ ಒಂಬತ್ತು ದಿವಸಗಳ ಕಾಲ ಪ್ರಮುಖ ದೇವಾಲಯಗಳಲ್ಲ ದೇವಿ ಪುರಾಣ ಹರಿಕಥೆ.ಶನಿಪುರಾಣ ದೇವೊಇ ಮಹತ್ಮೆ,ಮತ್ತು ಭಜನೆ ವಿಶೇಷ ಪೂಜಾಕಾರ್ಯಕ್ರಮಗಳು ಶ್ರದ್ದಾ ಪೂರ್ವಕವಾಗಿ ಜರುಗಿದವು. ಅದೇ ರೀತಿ ತಾಲ್ಲೂಕಿನ ಇತಿಹಾಸ ಪ್ರಸಿದ್ದ ಬಾಗೂರು. ನೀರಗುಂದ, ದೇವಪುರ, ಮತ್ತೋಡು ಶ್ರೀರಾಂಪುರ, ಎಸ್.ನೇರಲಕೆರೆ, ಬೆಲಗೂರು.ತೇಕಲವಟ್ಟಿ.ಜಾನಕಲ್ಲು, ಮಾಡದಕೆರೆ, ಬಳ್ಳೆಕರೆ ಬುರುಡೇಕಟ್ಟೆ ಮಳಲಿ ಮೈಲಾರಪುರ ಗವಿರಂಗಾಪುರ ಮುಂತಾದ ಗ್ರಾಮಗಳಲ್ಲಿಯೂ ಅಂಬಿನೋತ್ಸವ ಜರುಗಿತು.


Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T